ಕ್ರಾಂತಿಯ ಕಿಡಿ

# ಕಾಯಕ ಯೋಗಿ

ಸಂಪಾದಕರು : ಬಿ.ಕೆ. ಅರುಣಜ್ಯೋತಿ
KAYAKAYOGI - Morning Daily
ಕನ್ನಡ ದಿನಪತ್ರಿಕೆ

| ಮಂಡ್ಯ Mandya | ಸಂಪುಟ - 04 Volume - 04 | ಸಂಚಿಕೆ - 67 Issue - 67 | RNI No.KARKAN/2018/77805 POST NO. KA/SK/MND/999/2019-2021 | ಶುಕ್ರವಾರ Friday | 18-06-2021 | ಪುಟ - 04 Page - 04 | ಬೆಲೆ-ರೂ. 02 Price - 02 | ಸಂಪರ್ಕ 9980605484 | E-mail kayakayoginews@gmail.com |
|---|---|---|---|---|---|---|---|---|---|




CONTACT : Raju.K - 9008885553

# ಮಂಡ್ಯ ಮಿಮ್ಸ್‌ನಲ್ಲಿ ಅತ್ಯಾಧುನಿಕ ಐಸಿಯು

## 20 ಹಾಸಿಗೆ : ರಿಮೋಟ್ ಕಂಟ್ರೋಲ್ ವ್ಯವಸ್ಥೆ–ಸಕ್ಕರೆ ನಾಡಿನಲ್ಲಿ ಇದೇ ಮೊದಲು

ಮಂಡ್ಯ : ಜಿಲ್ಲಾ ಕೇಂದ್ರದಲ್ಲಿರುವ ಸರಕಾರಿ ವೈದ್ಯಕೀಯ ಕಾಲೇಜಿನಲ್ಲಿ ಪ್ರತಿಷ್ಠಿತ ಹೊಂಬಾಳೆ ಸಮೂಹದ ಆರ್ಥಿಕ ನೆರವಿನಿಂದ ಸ್ಥಾಪನೆ ಮಾಡಲಾಗಿರುವ 20 ಹಾಸಿಗೆಗಳ ಅತ್ಯಾಧುನಿಕ ಐಸಿಯು ಘಟಕವನ್ನು ರಾಜ್ಯ ಕೋವಿಡ್ ಕಾರ್ಯಪಡೆ ಅಧ್ಯಕ್ಷ ಹಾಗೂ ಉಪ ಮುಖ್ಯಮಂತ್ರಿ ಡಾ.ಸಿ.ಎನ್.ಅಶ್ವತ್ಥನಾರಾಯಣ ಉದ್ಘಾಟನೆ ನೆರವೇರಿಸಿದರು.

ಕಟ್ಟಡ ನಿರ್ಮಾಣ, ಸಿನಿಮಾ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿರುವ ವಿಜಯ್ ಕಿರಗಂದೂರು ಅವರ ನೇತೃತ್ವದ ಹೊಂಬಾಳೆ ಸಮೂಹವು, ಮಂಡ್ಯ ಜಿಲ್ಲೆಯಲ್ಲಿ ವೈದ್ಯಕೀಯ ಮೂಲಸೌಕರ್ಯಗಳನ್ನು ಒದಗಿಸಲು ಸುಮಾರು 2.35 ಕೋಟ ರೂ. ದೇಣಿಗೆ ನೀಡಿದೆ.

ಈ ನೆರವಿನ ಮೂಲಕ ಜಿಲ್ಲೆಯ ವೈದ್ಯಕೀಯ ಕಾಲೇಜಿನಲ್ಲಿ 55 ಲಕ್ಷ ರೂ. ವೆಚ್ಚದಲ್ಲಿ ಸುಸಜ್ಜಿತ ಐಸಿಯು ಸ್ಥಾಪಿಸಲಾಗಿದೆ. ಇನ್ನು ತಲಾ 90 ಲಕ್ಷ ರೂ. ವೆಚ್ಚದಲ್ಲಿ ಪಾಂಡವಪುರ ಮತ್ತು ಕೆ.ಆರ್.ಪೇಟೆ ತಾಲೂಕು ಆಸ್ಪತ್ರೆಗಳಲ್ಲಿ ಆಕ್ಸಿಜನ್ ಜನರೇಟರ್ ಘಟಕಗಳನ್ನು ಅಳವಡಿಸಲಾಗುತ್ತಿದೆ.

ಪಾಂಡವಪುರ ಆಸ್ಪತ್ರೆಯ ಆಕ್ಸಿಜನ್ ಘಟಕಕ್ಕೆ ಭೂಮಿ ಪೂಜೆ ನೆರೆವರಿಸಲಾಗಿದೆ. ಕೆ.ಆರ್.ಪೇಟೆ ಆಸ್ಪತ್ರೆಯಲ್ಲಿ ಈಗಾಗಲೇ ಯಂತ್ರಗಳನ್ನು ಅಳವಡಿಸಲಾಗುತ್ತಿದ್ದು, 15 ದಿನಗಳಲ್ಲಿ ಕಾಮಗಾರಿ ಪೂರ್ಣವಾಗಲಿದೆ. ಎರಡೂ ಆಮ್ಲಜನಕ ಘಟಕಗಳು ನಿಮಿಷಕ್ಕೆ 500 ಲೀಟರ್ ಆಮ್ಲಜನಕ ಉತ್ಪಾದಿಸಿ ಪೂರೈಕೆ ಮಾಡುವ ಸಾಮರ್ಥ್ಯ ಹೊಂದಿವೆ.

### ಹೊಂಬಾಳೆ ಸಮೂಹದ ನೆರವು : ಡಿಸಿಎಂ ಡಾ.ಸಿ.ಎನ್.ಅಶ್ವತ್ಥನಾರಾಯಣ ಲೋಕಾರ್ಪಣೆ



**ಐಸಿಯು ವೈಶಿಷ್ಟ್ಯಗಳೇನು?**

ಹೊಂಬಾಳೆ ಸಮೂಹದ ವ್ಯವಸ್ಥಾಪಕ ನಿರ್ದೇಶಕ ವಿಜಯ್ ಕಿರಗಂದೂರು ಅವರು ತಮ್ಮ ತವರು ಜಿಲ್ಲೆ ಮಂಡ್ಯದಲ್ಲಿ ಆರೋಗ್ಯ ಮೂಲಭೂತ ಸೌಕರ್ಯ ಹೆಚ್ಚಿಸಲು ಸರಕಾರದ ಜತೆ ಕೈ ಜೋಡಿಸಿ ದೇಣಿಗೆ ನೀಡಿದ್ದಾರೆ.

ಅವರ ಆಶಯದಂತೆ ನೂತನ ಐಸಿಯುನಲ್ಲಿ ಜಾಗತಿಕ ಗುಣಮಟ್ಟದ ವೆಂಟಿಲೇಟರ್‌ಗಳು, ಮಾನಿಟರ್‌ಗಳನ್ನು ಅಳವಡಿಸಲಾಗಿದೆ. ಮುಖ್ಯವಾಗಿ ರಿಮೋಟ್ ಕಂಟ್ರೋಲ್ ವ್ಯವಸ್ಥೆ ಇದ್ದು, ವೈದ್ಯರು ಯಾವುದೇ ಭಾಗದಲ್ಲಿದ್ದರೂ ರೋಗಿಗೆ ಅತ್ಯುತ್ತಮ ಚಿಕಿತ್ಸೆ ನೀಡಬಹುದು. ಚತುಷ್ಮುಖಿ (four way communication system) ಸಂಪರ್ಕ ಜಾಲದ ಸೌಲಭ್ಯವನ್ನು ಈ ಐಸಿಯು ಹೊಂದಿದೆ. ಮಂಡ್ಯದಲ್ಲಿ ಇದೇ ಮೊದಲಿಗೆ ಇಂಥ ಆಧುನಿಕ ಐಸಿಯು ಸ್ಥಾಪನೆ ಆಗಿದೆ.

ಈ ಬಗ್ಗೆ ಪ್ರತಿಕ್ರಿಯೆ ನೀಡಿರುವ ವಿಜಯ್ ಕಿರಗಂದೂರು ಅವರು; "ಕೋವಿಡ್ ಬಂದು ಇಡೀ ಜಗತ್ತಿನ ಆದ್ಯತೆಗಳು ಬದಲಾಗಿವೆ. ಆರೋಗ್ಯ ಎನ್ನುವುದು ಬಹಳ ಮುಖ್ಯ ಎನ್ನುವ ಅರಿವಾಗಿದೆ. ಹೀಗಾಗಿ ಬಡವ–ಬಲ್ಲಿದನೆಂಬ ಬೇಧವಿಲ್ಲದೆ ಪ್ರತಿಯೊಬ್ಬರಿಗೂ ಗುಣಮಟ್ಟದ ಚಿಕಿತ್ಸೆ ಸಿಗಬೇಕು ಎನ್ನುವುದು ನನ್ನ ಕಾಳಜಿ. ಆದ್ದರಿಂದ ನನ್ನ ತವರು ಜಿಲ್ಲೆ ಮಂಡ್ಯದಲ್ಲಿ ಆರೋಗ್ಯ ಮೂಲಸೌಕರ್ಯಗಳನ್ನು ಹೆಚ್ಚಿಸಲು ಒಂದು ಅಳಿಲು ಸೇವೆಯನ್ನು ಸಲ್ಲಿಸಿದ್ದೇನೆ" ಎಂದರು.

ಕಾರ್ಯಕ್ರಮದಲ್ಲಿ ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವ ಡಾ.ಕೆ.ಸಿ. ನಾರಾಯಣಗೌಡ, ಶಾಸಕರಾದ ಎಂ.ಶ್ರೀನಿವಾಸ, ಕೆ.ಟಿ.ಶ್ರೀಕಂಠೇಗೌಡ, ಡಿಸಿಸಿ ಬ್ಯಾಂಕಿನ ವ್ಯವಸ್ಥಾಪಕ ನಿರ್ದೇಶಕ ಸಿ.ಪಿ.ಉಮೇಶ್, ಜಿಲ್ಲಾಧಿಕಾರಿ ಅಶ್ವತಿ, ಹೊಂಬಾಳೆ ಸಮೂಹದ ನಿರ್ದೇಶಕ ಚೆಲುವೇಗೌಡ, ವಿಮ್ಸ್ ನಿರ್ದೇಶಕ ಹರೀಶ ಜಿಲ್ಲೆಯ ಉನ್ನತ ಅಧಿಕಾರಿಗಳು ಪಾಲ್ಗೊಂಡಿದ್ದರು.

# ರಾಜ್ಯದಲ್ಲಿ ಹೆಣದ ಮೇಲೆ ಸರ್ಕಾರದ ಆಡಳಿತ

ಕೃಷ್ಣರಾಜಪೇಟೆ. ರಾಜ್ಯದಲ್ಲಿ ಸಾವಿನ ಮನೆಯಲ್ಲಿ ಗಳ ಕೀಳುವ ಕೆಲಸ ನಡೆಯುತ್ತಿದೆ, ರಾಜ್ಯದ ಬಿಜೆಪಿ ಸರ್ಕಾರವು ಕೋವಿಡ್ ನಿರ್ವಹಣೆಯಲ್ಲಿ ಸಂಪೂರ್ಣವಾಗಿ ಎಡವಿದೆ. ಸತ್ತ ಹೆಣಗಳ ಮೇಲೆ ರಾಜ್ಯ ಸರ್ಕಾರವು ಆಡಳಿತ ನಡೆಸುತ್ತಿದೆ ಎಂದು ರಾಜ್ಯದ ಮಾಜಿಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಆಕ್ರೋಶ ವ್ಯಕ್ತಪಡಿಸಿದರು.

ಪಟ್ಟಣದ ಟಿಎಪಿಸಿಎಂಎಸ್ ಸಹಕಾರ ಭವನದಲ್ಲಿ ತಾಲೂಕು ಜೆಡಿಎಸ್ ಪಕ್ಷವು ಕೋವಿಡ್ ವಾರಿಯರ್ಸ್‌ಗಳಿಗೆ ಆಯೋಜಿಸಿದ್ದ ಫುಡ್‌ಕಿಟ್ ವಿತರಣಾ ಸಮಾರಂಭದಲ್ಲಿ ಭಾಗವಹಿಸಿ ಸಾಂಕೇತಿಕವಾಗಿ ಆಶಾ, ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಪೌರಕಾರ್ಮಿಕರಿಗೆ ಫುಡ್ ಕಿಟ್‌ಗಳನ್ನು ವಿತರಿಸಿ ಮಾತನಾಡಿದರು.

ಕೋವಿಡ್ 2ನೇ ಅಲೆಯ ನಿರ್ವಹಣೆಯಲ್ಲಿ ರಾಜ್ಯ ಸರ್ಕಾರವು ಎಡವಿದ್ದು ಅಪಾರವಾದ ಸಾವು ನೋವುಗಳು ಸಂಭವಿಸಿವೆ. ಮಂಡ್ಯ ಮತ್ತು ಮೈಸೂರು ಜಿಲ್ಲೆಯಲ್ಲಿ, ಬೆಂಗಳೂರು ಮಹಾನಗರದಲ್ಲಿ ಕೋವಿಡ್‌ನಿಂದ ಸಂಭವಿಸಿರುವ ಸಾವುನೋವುಗಳನ್ನು ಕಂಡು ನನಗೆ ಭಾರೀ ನೋವಾಗಿದೆ. ಕೋವಿಡ್ ನಿರ್ವಹಣೆಯಲ್ಲಿ ರಾಜ್ಯ ಸರ್ಕಾರವು ಸಂಪೂರ್ಣವಾಗಿ ಮುಗ್ಗರಿಸಿದೆ. ಮೂರನೇ ಅಲೆಯ ಹೊಡೆತವನ್ನು ನಿಯಂತ್ರಿಸಲು ಈಗಿನಿಂದಲೇ ರಾಜ್ಯ ಸರ್ಕಾರವು ಸನ್ನದ್ಧವಾಗಿರಬೇಕು. ಅಗತ್ಯ ಸಿದ್ಧತೆಗಳನ್ನು ಈಗಿನಿಂದಲೇ ತೆಗೆದುಕೊಳ್ಳಬೇಕು. ಯುದ್ಧ ಕಾಲದಲ್ಲಿ ಶಸ್ತ್ರಾಭ್ಯಾಸ ಮಾಡಲು ಹೋಗಿ ಎರಡನೇ ಅಲೆಯಲ್ಲಿ ಎಡವಿದಂತಾಗಬಾರದು ಎಂದು ಹೆಚ್‌ಡಿಕೆ ಮುಖ್ಯಮಂತ್ರಿಗಳಿಗೆ ಕಿವಿಮಾತು ಹೇಳಿದರು.

### ಕೋವಿಡ್ ನಿರ್ವಹಣೆಯಲ್ಲಿ ವಿಫಲ : ಎಚ್‌ಡಿಕೆ ಆಕ್ರೋಶ




ರಾಜ್ಯದಲ್ಲಿ ಆಡಳಿತ ನಡೆಸುತ್ತಿರುವ ಬಿಜೆಪಿ ಸರ್ಕಾರದ ದೊಂಬರಾಟವನ್ನು ಕಂಡು ರಾಜ್ಯದ ಜನತೆ ಬೇಸತ್ತಿದ್ದಾರೆ. ಬೆಲೆ ಏರಿಕೆಯ ಹೊಡೆತವು ಶ್ರೀಸಾಮಾನ್ಯರನ್ನು ಹಣ್ಣುಗಾಯಿ ನೀರುಗಾಯಿ ಮಾಡಿದೆ. ಕೋವಿಡ್ 2ನೇ ಅಲೆಯ ಸಂಕಷ್ಟದ ಸಮಯದಲ್ಲಿಯೂ ಬೆಲೆ ಏರಿಕೆಯಿಂದ ಜನಸಾಮಾನ್ಯರು ತತ್ತರಿಸಿಹೋಗಿದ್ದರೆ ಬಿಜೆಪಿ ಪಕ್ಷದ ಶಾಸಕರು ಅಧಿಕಾರದ ಲಾಲಸೆಯಿಂದ ಮುಖ್ಯಮಂತ್ರಿಗಳ ವಿರುದ್ಧ ರಾಜಕೀಯ ಷಡ್ಯಂತ್ರ ನಡೆಸಿ ಹೈಕಮಾಂಡ್‌ಗೆ ದೂರು ನೀಡಿ ರಾಜ್ಯದಲ್ಲಿ ಅರಾಜಕತೆಯನ್ನು ನಿರ್ಮಿಸಲು ಹೊರಟಿದ್ದಾರೆ. ಕೋವಿಡ್‌ನಿಂದ ರಾಜ್ಯದಲ್ಲಿ ಶ್ರೀಸಾಮಾನ್ಯನ ಬದುಕು ಮೂರಾಬಟ್ಟೆಯಾಗಿರುವುದು ಬಿಜೆಪಿ ಶಾಸಕರ ಕಣ್ಣಿಗೆ ಕಾಣುತ್ತಿಲ್ಲವೇ, ಕೋವಿಡ್ ನಂತಹ ಸಂದರ್ಭದಲ್ಲಿ ಇಂತಹ ರಾಜಕೀಯ ಮೇಲಾಟಗಳ ಅವಶ್ಯಕತೆಯಿತ್ತೇ ಎಂದು ಪತ್ರಕರ್ತರಿಗೆ ಪ್ರಶ್ನೆ ಹಾಕಿದ ಹೆಚ್.ಡಿ.ಕುಮಾರಸ್ವಾಮಿ ಮಾಜಿ ಸಚಿವ ವಿಧಾನಪರಿಷತ್ ಸದಸ್ಯ ಎಚ್.ವಿಶ್ವನಾಥ್ ಎಲ್ಲಿಗೇ ಹೋದರೂ ತಮ್ಮ ಛಾಳಿಯನ್ನು ಬಿಡುವುದಿಲ್ಲ. ಅಧಿಕಾರ ಮತ್ತು ಹಣಕ್ಕಾಗಿ ಏನು ಬೇಕಾದರೂ ಮಾಡಲು ಅವರು ಸದಾ ಸಿದ್ಧರಾಗಿರುತ್ತಾರೆ. ನಮ್ಮದು ಅಪ್ಪಮಕ್ಕಳ ಪಕ್ಷ ಎನ್ನುವುದು ವಿಶ್ವನಾಥ್ ಅವರು ಹುಣಸೂರಿನಿಂದ ಜೆಡಿಎಸ್ ಬಿ'ಫಾರಂ ಪಡೆದುಸ್ಪರ್ಧೆ ಮಾಡುವಾಗ ತಿಳಿದಿರಲಿಲ್ಲವೇ, ಅವರ ಮಗ ಅಮೀತ್ ಜಿಲ್ಲಾ ಪಂಚಾಯಿತಿ ಸದಸ್ಯರಲ್ಲವೇ ಅವರ ಮನೆಯಲ್ಲಿ ಅಪ್ಪ ಮಕ್ಕಳು ಅಧಿಕಾರ ಅನುಭವಿಸಬಹುದು, ನಮ್ಮ ಮನೆಯಲ್ಲಿ ಅದು ತಪ್ಪಾಗಿ ಕೆಲವರ ಕಣ್ಣಿಗೆ ಕಾಣಿಸುತ್ತದೆ ನಾನೇನು ಮಾಡಲಿ ಹೇಳಿ ಎಂದು ಹೇಳಿದ ಕುಮಾರಸ್ವಾಮಿ ಕಾಂಗ್ರೆಸ್ ಮತ್ತು ಬಿಜೆಪಿ ಪಕ್ಷಗಳೆರಡೂ ಜನವಿರೋಧಿ ಪಕ್ಷಗಳು ಎನ್ನುವುದು ರಾಜ್ಯದ ಜನತೆಗೆ ಗೊತ್ತಿದೆ. ನಾನು ಮುಂದಿನ ವರ್ಷ ಸಂಕ್ರಾಂತಿ ಹಬ್ಬದ **4ನೇ ಪುಟಕ್ಕೆ...**

## ಸಿದ್ದಗಂಗಾಮಠದಲ್ಲಿ ವಿದ್ಯಾರ್ಥಿಗಳಿಗೆ ಪ್ರವೇಶ

### ಜೂ.21ರಿಂದ ಅರ್ಜಿ ವಿತರಣೆ



ಮಂಡ್ಯ : ತುಮಕೂರಿನ ಸಿದ್ದಗಂಗಾಮಠದ ಶ್ರೀಸಿದ್ಧಲಿಂಗೇಶ್ವರ ಅನಾಥಾಲಯದಲ್ಲಿ ವಿದ್ಯಾರ್ಥಿಗಳಿಗೆ ಪ್ರವೇಶ ಪತ್ರಗಳನ್ನು ಜೂ.21ರಿಂದ ನೀಡಲಾಗುವುದು ಎಂದು ಮಠದ ಪೀಠಾಧ್ಯಕ್ಷರಾದ ಶ್ರೀ ಸಿದ್ದಲಿಂಗಮಹಾಸ್ವಾಮೀಜಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹೊಸದಾಗಿ ಮಠದಲ್ಲಿ ವಿದ್ಯಾಭ್ಯಾಸಕ್ಕೆ ಸೇರ್ಪಡೆಯಾಗ ಬಯಸುವ ಗ್ರಾಮೀಣ ಬಡ ಕುಟುಂಬದ ವಿದ್ಯಾರ್ಥಿಗಳು ಶ್ರೀಮಠದಲ್ಲಿ ಪ್ರವೇಶ ಪತ್ರವನ್ನು ಪಡೆಯಬಹುದು. ಪರಿಶಿಷ್ಠ ಜಾತಿ ಮತ್ತು ಪ.ಪಂಗಡದವರಿಗೆ ಆಧ್ಯತೆ ನೀಡಲಾಗುವುದು.

ಸರಿಯಾಗಿ ಭರ್ತಿ ಮಾಡಿದ ಪ್ರವೇಶ ಪತ್ರವನ್ನು ಆಯಾ ತಾಲ್ಲೂಕಿನ ತಹಸೀಲ್ದಾರ್ ಅವರಿಂದ ನಿಗಧಿತ ನಮೂನೆಯಲ್ಲಿ ಧೃಡೀಕರಿಸಲ್ಪಟ್ಟ ವಾರ್ಷಿಕ ವರದಮಾನದ ಆದಾಯ ಪ್ರಮಾಣ ಪತ್ರವನ್ನು ಉಳಿದ ಸರ್ಟಿಫಿಕೇಟ್‌ಗಳೊಂದಿಗೆ ಜೂ.30ರೊಳಗೆ ಅನಾಥಾಲಯದ ಕಚೇರಿಗೆ ತಲುಪಿಸಬೇಕು.

ಪ್ರವೇಶವನ್ನು ಅಪೇಕ್ಷಿಸುವ ವಿದ್ಯಾರ್ಥಿಗಲು 1.7.2021ರಿಂದ ಪ್ರಾರಂಭವಾಗುವ ಸಂದರ್ಶನದ ವೇಳೆಯಲ್ಲಿ ಖುದ್ದಾಗಿ ಬರಬೇಕು. ಪ್ರತ್ಯೇಕವಾದ ಸಂದರ್ಶನದ ಪತ್ರಗಳನ್ನು ಕಳುಹಿಸಲಾಗುವುದಿಲ್ಲ ಎಂದು ಪೂಜ್ಯಶ್ರೀಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹೆಚ್ಚಿನ ವಿವರಗಳಿಗೆ 08162955059 ಸಂಖ್ಯೆಯನ್ನು ಸಂಪರ್ಕಿಸಬಹುದು.

# ಕೋವಿಡ್ 3ನೇ ಅಲೆ ಸಾಧ್ಯತೆ

### ಮಕ್ಕಳ ಮೇಲೆ ನಿಗಾ ವಹಿಸಿ : ಸಚಿವೆ ಶಶಿಕಲಾ ಅ ಜೊಲ್ಲೆ

ಮಂಡ್ಯ : ಮಕ್ಕಳ ಮೇಲೆ ಕೋವಿಡ್ ಮೂರನೇ ಅಲೆಯ ಸಂಭಾವ್ಯ ಪರಿಣಾಮ ನಿಯಂತ್ರಣದ ನಿಟ್ಟಿನಲ್ಲಿ ಸೋಂಕಿನಿಂದ ಮಕ್ಕಳ ರಕ್ಷಣೆ, ಮುನ್ನೆಚ್ಚರಿಕೆ, ಜಾಗೃತಿ, ಪ್ರತ್ಯೇಕ ಕೋವಿಡ್ ವಾರ್ಡ್‌ಗಳ ಸಿದ್ಧತೆ, ಪಾಲಕರಿಗೆ ವ್ಯವಸ್ಥೆ ಕುರಿತಂತೆ ಶಿಶು ಅಭಿವೃದ್ಧಿ ಅಧಿಕಾರಿಗಳು ಕ್ಷೇತ್ರ ಮಟ್ಟಕ್ಕಿಳಿದು ಕಾರ್ಯನಿರ್ವಹಿಸುವಂತೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಸಚಿವೆ ಶಶಿಕಲಾ ಜೊಲ್ಲೆ ಅವರು ತಿಳಿಸಿದರು.

ಜಿಲ್ಲಾ ಪಂಚಾಯತ್ ನ ಕಾವೇರಿ ಸಭಾಂಗಣದಲ್ಲಿ ಜಿಲ್ಲೆಯಲ್ಲಿ ಕೊರೊನಾ ಸಂಭಾವ್ಯ ಮೂರನೇ ಅಲೆಯಿಂದ ಮಕ್ಕಳ ರಕ್ಷಣೆ ಹಾಗೂ ಆರೈಕೆಗೆ ಕೈಗೊಳ್ಳಬೇಕಾದ ಮುಂಜಾಗ್ರತಾ ಕ್ರಮಗಳ ಕುರಿತು ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಮಾತನಾಡಿದರು.

ಮೂರನೇ ಅಲೆ ಎದುರಿಸಲು ಜಿಲ್ಲಾಡಳಿತ ಮತ್ತು ಆರೋಗ್ಯ ಇಲಾಖೆ ಕೈಗೊಂಡಿರುವ ಕ್ರಮಗಳ ಕುರಿತಂತೆ ಮೆಚ್ಚುಗೆ ವ್ಯಕ್ತಪಡಿಸಿದರು. ಕೋವಿಡ್ ಜೊತೆಗೆ ಇತರ ಗಂಭೀರ ಕಾಯಿಲೆ ಪೀಡತ ಮಕ್ಕಳನ್ನು ಹೋಂ ಐಸೋಲೇಷನ್



ಬದಲು ಕೋವಿಡ್ ಮಕ್ಕಳ ವಾರ್ಡ್‌ಗಳಲ್ಲಿ ಚಿಕಿತ್ಸೆ ನೀಡುವಂತೆ ಸಲಹೆ ನೀಡಿದರು.

ಮಕ್ಕಳ ಕೋವಿಡ್ ವಾರ್ಡ್ ಹಾಗೂ ಮಕ್ಕಳ ಕೊವಿಡ್ ಕೇರ್ ಸೆಂಟರ್‌ಗಳಲ್ಲಿ ಚಿಕ್ಕ ಮಕ್ಕಳ ಜೊತೆಗೆ ಪಾಲಕರಿಗೂ ಉಳಿದುಕೊಳ್ಳಲು ವ್ಯವಸ್ಥೆ ಕೈಗೊಳ್ಳುವುದು ಅತ್ಯವಶ್ಯವಾಗಿದೆ. ಐಸಿಯು ವಾರ್ಡ್‌ಗಳಲ್ಲಿ ಮಕ್ಕಳ ಜೊತೆಗೆ ಪಾಲಕರಿಗೂ ಪ್ರತ್ಯೇಕ ವ್ಯವಸ್ಥೆ ಮಾಡಬೇಕು ಹಾಗೂ ಕೋವಿಡ್ ಕೇರ್ ಸೆಂಟರ್‌ಗಳಲ್ಲಿ ಪಾಲಕರಿಗೆ ಪ್ರತ್ಯೇಕ ವ್ಯವಸ್ಥೆಮಾಡಿ 10 ರಿಂದ 18 ವರ್ಗದೊಳಗಿನ ಸೋಂಕಿತ ಮಕ್ಕಳ ಪೈಕಿ ಬಾಲಕಿಯರಿಗೆ ಹಾಗೂ ಬಾಲಕರಿಗೆ ಪ್ರತ್ಯೇಕ ವ್ಯವಸ್ಥೆ ಕೈಗೊಳ್ಳುವಂತೆ ಸಲಹೆ ನೀಡಿದರು.

ಹೋಂ ಐಸೋಲೇಷನಲ್ಲಿರುವ ಸೋಂಕಿತ ಮಕ್ಕಳು ಪ್ರತ್ಯೇಕತೆ ಹಾಗೂ ಮಾಸ್ಕ್ ಧರಿಸುವ ಅರಿವು ಇರುವುದಿಲ್ಲ. ಕೆಲ ಮನೆಗಳಲ್ಲಿ ಪ್ರತ್ಯೇಕ ಕೊಠಡಿ, ಶೌಚಾಲಯ ವ್ಯವಸ್ಥೆ ಇರುವುದಿಲ್ಲ. ಇದರಿಂದ ಪಾಲಕರಿಗೂ ಸೋಂಕು ತಗಲುವ ಅಪಾಯವಾಗಿದೆ. ಈ ಕುರಿತಂತೆ ಅಂಗನವಾಡಿ ಕಾರ್ಯಕರ್ತರು, ಶಿಶು ಅಭಿವೃದ್ಧಿ ಅಧಿಕಾರಿಗಳು ಐಸೋಲೇಷನಲ್ಲಿರುವ ಮಕ್ಕಳಿಗೆ ಹಾಗೂ ಪಾಲಕರ ಕೌನ್ಸಲಿಂಗ್ ನಡೆಸಬೇಕು. ನಿರಂತರ ಜಾಗೃತಿ ಹಾಗೂ ಮುನ್ನೆಚ್ಚರಿಕೆಗಳ ಕುರಿತಂತೆ ಅರಿವು ಮೂಡಿಸಬೇಕು. ಮನೆಯಲ್ಲಿ ಪ್ರತ್ಯೇಕ ವ್ಯವಸ್ಥೆ ಇಲ್ಲದ ಸೋಂಕಿತ ಮಕ್ಕಳನ್ನು ಕೊವಿಡ್ ಆರೈಕೆ ಕೇಂದ್ರಗಳಲ್ಲಿರುವ ಪ್ರತ್ಯೇಕ ವಾರ್ಡ್‌ಗಳಲ್ಲಿ ದಾಖಲಿಸಲು ಮನವೊಲಿಸಲು ಸೂಚನೆ ನೀಡಿದರು.

ಅನಾಥ ಮಕ್ಕಳಿಗೆ ಶಿಕ್ಷಣ, ಆರ್ಥಿಕ ನೆರವು, ಉದ್ಯೋಗ, ತರಬೇತಿ ಕುರಿತಂತೆ ಮಾರ್ಗಸೂಚಿಯಂತೆ ಇಲಾಖಾ ಅಧಿಕಾರಿಗಳು ಜಾಗೃತಿ ಮೂಡಿಸಬೇಕು. ವಲಸೆ ಬಂದ ಮಕ್ಕಳು ಹಾಗೂ ತೀವ್ರ ಅಪೌಷ್ಠಿಕತೆಯಿಂದ ಬಳಲುವ ಮಕ್ಕಳಿಗೆ ಪೌಷ್ಠಿಕ ಆಹಾರ ವಿತರಣೆ ಹಾಗೂ ಸೋಂಕಿನಿಂದ ತುತ್ತಾಗದಂತೆ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕು. ತೀವ್ರ ಅಪೌಷ್ಠಿಕತೆಯಿಂದ ಬಳಲುವ ಮಕ್ಕಳಿಗೆ ನ್ಯೂಟ್ರಿಷಿಯನ್ ರಿಯಾಬ್ಲೆಷನ್ ಸೆಂಟರ್‌ಗಳನ್ನು ಅಭಿವೃದ್ಧಿ ಪಡಿಸಲು ಸೂಚನೆ ನೀಡಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಹಾಗೂ ಜಿಲ್ಲಾ ಆರೋಗ್ಯಾಧಿಕಾರಿಯವರು ಕೋವಿಡ್ ಮೂರನೇ ಅಲೇ ಪ್ರಭಾವದ ಹಿನ್ನೆಲೆಯಲ್ಲಿ ಜಿಲ್ಲೆಯಲ್ಲಿ **4ನೇ ಪುಟಕ್ಕೆ...**

### ಲಸಿಕಾ ಅಭಿಯಾನಕ್ಕೆ ಜಿಲ್ಲಾಧಿಕಾರಿ ಚಾಲನೆ



ಮಂಡ್ಯ : ಕರೋನಾದಿಂದ ಪಾರಾಗಲು ಆಯೋಜಿಸಿರುವ ಲಸಿಕಾ ಅಭಿಯಾನದ ಸದುಪಯೋಗ ಪಡೆದುಕೊಳ್ಳಿ ಎಂದು ಜಿಲ್ಲಾಧಿಕಾರಿ ಎಸ್.ಅಶ್ವಥಿ ಹೇಳಿದರು.

ಬೆಳಕವಾಡಿ ಮತ್ತು ಹನಕೆರೆ ಗ್ರಾಮದಲ್ಲಿ ಜಿಲ್ಲಾಡಳಿತ ಮತ್ತು ಆರೋಗ್ಯ ಇಲಾಖೆಯಿಂದ ಆಯೋಜಿಸಿದ್ದ ಲಸಿಕಾ ಅಭಿಯಾನಕ್ಕೆ ಚಾಲನೆ ನೀಡಿ ಬಳಿಕ ಮಾತನಾಡಿದ ಅವರು, ಲಸಿಕಾ ಅಭಿಯಾನದಲ್ಲಿ 45 ವರ್ಗ ಮೇಲ್ಪಟ್ಟವರಿಗೆ ಹಾಗೂ ಆದ್ಯತಾ ವರ್ಗಕ್ಕೆ ಲಸಿಕೆಯನ್ನು ಹಾಕಲಾಗುತ್ತಿದ್ದು ಇದನ್ನು ಸದುಪಯೋಗಪಡಿಸಿಕೊಳ್ಳಿ ಎಂದರು.


ಕೊರೋನಾ ನಿಯಂತ್ರಣಕ್ಕೆ ಸರ್ಕಾರ ಸೂಚಿಸಿರುವ ಮಾರ್ಗಸೂಚಿಗಳನ್ನು ಕಡ್ಡಾಯವಾಗಿ ಪಾಲಿಸಬೇಕು ಎಂದರು. ಸಾಮಾಜಿಕ ಅಂತರ, ಮಾಸ್ಕ್ ಧರಿಸುವುದು, ಸ್ಯಾನಿಟೈಜರ್ ಬಳಕೆ ಮತ್ತು ಶುಚಿತ್ವಕ್ಕೆ ಆದ್ಯತೆ ನೀಡಬೇಕೆಂದು ಮನವಿ ಮಾಡಿದರು. ಶಾಸಕ ಎಂ.ಶ್ರೀನಿವಾಸ್ ಮಾತನಾಡಿ, ದೇಶ ಅತ್ಯಂತ ಸಂಕಷ್ಟ ಸನ್ನಿವೇಶದಲ್ಲಿದ್ದು ಎಲ್ಲರೂ ಎಚ್ಚರಿಕೆಯಿಂದ ಇರಬೇಕಾಗಿದೆ. ಎರಡನೇ ಅಲೆಯಲ್ಲಿ ನಾವೆಲ್ಲ ಸಾಕಷ್ಟು ಸಾವು–ನೋವು ಅನುಭವಿಸಿದ್ದೇವೆ. ಕೋವಿಡ್ ಮೂರನೇ ಅಲೆಯು ಬರಲಿದೆ ಎಂದು ಈಗಾಗಲೇ ವಿಜ್ಞಾನಿಗಳು, ಆರೋಗ್ಯ ಪರಿಣಿತರು ಎಚ್ಚರಿಸಿದ್ದಾರೆ, ಆದ್ದರಿಂದ ಲಾಕ್‌ಡೌನ್ ಮುಗಿದಿದೆ ಎಂದು ಅಥವಾ ಕೋವಿಡ್ ಎರಡನೇ ಅಲೆ ಕಡಿಮೆಯಾಗಿದೆ ಎಂದು ಮೈ ಮರೆಯಬೇಡಿ ಎಂದು ಸಾರ್ವಜನಿಕರಲ್ಲಿ ಮನವಿ ಮಾಡಿದರು.

**ಶೇ.3ಕ್ಕೆ ಇಳಿಕೆ :** ಜಿಲ್ಲೆಯಲ್ಲಿ ಕೋವಿಡ್ ಸೋಂಕಿನ ಪ್ರಮಾಣವು ಕಳೆದ ನಾಲ್ಕೈದು ದಿನಗಳಿಂದ ಶೇ.3ಕ್ಕೆ ಇಳಿದಿರುವುದಕ್ಕೆ ಶಾಸಕ ಸುರೇಶ್‌ಗೌಡ ಹರ್ಷ ವ್ಯಕ್ತಪಡಿಸಿ, ಇದೇ ರೀತಿ ಕ್ರಮೇಣ ಇಡೀ ದೇಶದಿಂದಲೇ ತೊಲಗಲಿ ಎಂದು ಹೇಳಿದರು.

ತಹಸಿಲ್ದಾರ್ ಚಂದ್ರಶೇಖರ್ ಶಂ.ಗಾಳಿ, ಇಒ ವೇಣು, ಟಿಎಚ್‌ಒ ಜವರೇಗೌಡ, ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಸುಬಿಂದು, ಗ್ರಾಪಂ ಅಧ್ಯಕ್ಷೆ ಅನಿತಾ ಕುಮಾರ್, ಪಿಡಿಒ ಭಾಗ್ಯ, ರೆವಿನ್ಯೂ ಇನ್‌ಸ್ಪೆಕ್ಟರ್ ಪ್ರಭು, ಮುಖಂಡರಾದ ಅಶ್ವಥ್, ಮಾದಯ್ಯ, ನಾಗರಾಜಯ್ಯ ಸೇರಿದಂತೆ ಇತರರಿದ್ದರು.

## ಮಂಡ್ಯ ಕೊರೊನಾ ಮೀಟರ್

**ಕೊರೋನಾ ಸೋಂಕು : 323 – ಸಾವು : 02**



ಮಂಡ್ಯ : ಜಿಲ್ಲೆಯ ವಿವಿಧ ತಾಲ್ಲೂಕುಗಳ 323 ಮಂದಿಗೆ ಗುರುವಾರ ಕೊರೋನಾ ಸೋಂಕು ದೃಢಪಟ್ಟಿದ್ದು, 2 ಮಂದಿ ಕೋವಿಡ್‌ನಿಂದ ಮೃತಪಟ್ಟಿದ್ದಾರೆ. ರೋಗಿಗಳಿಗೆ ಆಸ್ಪತ್ರೆಯಲ್ಲಿ ಸೂಕ್ತ ಚಿಕಿತ್ಸೆ ನೀಡಲಾಗುತ್ತಿದೆ.

ಮಂಡ್ಯ–74, ಮದ್ದೂರು–28, ಮಳವಳ್ಳಿ–30, ಪಾಂಡವಪುರ–28, ಶ್ರೀರಂಗಪಟ್ಟಣ–45, ಕೆ.ಆರ್.ಪೇಟೆ–75, ನಾಗಮಂಗಲ–29 ಹಾಗೂ ಹೊರ ಜಿಲ್ಲೆಯ 14 ಮಂದಿಗೆ ಕೊರೋನಾ ಸೋಂಕು ಕಾಣಿಸಿಕೊಂಡಿದೆ. ಈ ದಿನ 496 ಮಂದಿ ಗುಣಮುಖರಾಗಿ ಆಸ್ಪತ್ರೆಯಿಂದ ಬಿಡುಗಡೆಯಾಗಿದ್ದಾರೆ. ಜಿಲ್ಲೆಯಲ್ಲಿ 3212 ಸಕ್ರಿಯ ಪ್ರಕರಣಗಳಿವೆ. ಸರ್ಕಾರಿ ಆಸ್ಪತ್ರೆಯಲ್ಲಿ 320, ಕೋವಿಡ್‌ಕೇರ್ ಸೆಂಟರ್‌ನಲ್ಲಿ 1008, ಖಾಸಗಿ ಆಸ್ಪತ್ರೆಯಲ್ಲಿ 55 ಮನೆಯಲ್ಲಿ 1829 ಮಂದಿ ಚಿಕಿತ್ಸೆ ಪಡೆಯುತ್ತಿದ್ದಾರೆ.

ಕ್ರಾಂತಿಯಕಿಡಿ
ಕಾಯಕಯೋಗಿ
KAYAKAYOGI-MORNING DAILY ಕನ್ನಡ ದಿನಪತ್ರಿಕೆ
ಶುಕ್ರವಾರ 18 ಜೂನ್ 2021



ಮಂಡ್ಯ ಮಹಿಳಾ ಕಾಂಗ್ರೆಸ್ ವತಿಯಿಂದ ನಗರದ ಕೆಟಿಆರ್ ಪೆಟ್ರೋಲ್ ಬಂಕ್ ಮುಂಭಾಗದಲ್ಲಿ ಪೆಟ್ರೋಲ್ ಬೆಲೆ ಏರಿಕೆ ಖಂಡಿಸಿ ಪ್ರತಿಭಟನೆ ಮಾಡಿದರು. ಈ ಸಂದರ್ಭದಲ್ಲಿ ಅಂಜನಾ ಶ್ರೀಕಾಂತ್, ಸುಧಾ ಶಿವರಾಮು ಮತ್ತಿತರರು ಇದ್ದರು.

# ಕೋವಿಡ್ ಪರಿಣಾಮಕಾರಿ ತಡೆಗೆ ಬಿ.ಬಿ.ಕಾವೇರಿ ಸೂಚನೆ

ಚಾಮರಾಜನಗರ : ಕೋವಿಡ್-19 ನಿಯಂತ್ರಣ ಮತ್ತು ಇದಕ್ಕೆ ಅಗತ್ಯವಿರುವ ಮುನ್ನೆಚ್ಚರಿಕೆ ಕ್ರಮಗಳ ಬಗ್ಗೆ ಎಲ್ಲಾ ಇಲಾಖೆಗಳು ಸಕ್ರಿಯವಾಗಿ ತೊಡಗಿ ಕೊಂಡು ಕಾರ್ಯನಿರ್ವಹಿಸಬೇಕೆಂದು ಪೌರಾಡಳಿತ ನಿರ್ದೇಶಕರು ಹಾಗೂ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಬಿ.ಬಿ. ಕಾವೇರಿ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಕೋವಿಡ್ ನಿಯಂತ್ರಣ ಸಂಬಂಧ ನಡೆದ ಆರೋಗ್ಯ ಇಲಾಖೆಯ ಅಧಿಕಾರಿಗಳು ಹಾಗೂ ಕೋವಿಡ್ ತಡೆ ಕುರಿತು ನಿಯೋಜನೆಯಾಗಿರುವ ನೋಡಲ್ ಅಧಿಕಾರಿಗಳ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕೋವಿಡ್ ಹರಡುವಿಕೆ ತಡೆಯುವ ಕಾರ್ಯ ಅನುಷ್ಠಾನದಲ್ಲಿ ಮತ್ತಷ್ಟು ಬಿಗಿ ಕ್ರಮಗಳನ್ನು ತೆಗೆದುಕೊಳ್ಳಬೇಕು. ಆರೋಗ್ಯ ಇಲಾಖೆಯೊಂದಿಗೆ ಎಲ್ಲಾ ಇಲಾಖೆಗಳು ಸಹ ಸಕ್ರಿಯವಾಗಿ ತೊಡಗಿಕೊಳ್ಳಬೇಕು. ಕೋವಿಡ್ ಪರಿಣಾಮಕಾರಿಯಾಗಿ ತಡೆಯುವ ನಿಟ್ಟಿನಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಸಮಾಜ ಕಲ್ಯಾಣ ಇಲಾಖೆ ಸೇರಿದಂತೆ ಇತರೆ ಇಲಾಖೆಗಳ ಪಾತ್ರವೂ ಅತ್ಯಂತ ಮುಖ್ಯ ವಾಗಿದೆ ಎಂದರು.



ಮುಂಬರುವ ದಿನಗಳಲ್ಲಿಯೂ ಅತ್ಯಂತ ಮುನ್ನೆಚ್ಚರಿಕೆ ಕ್ರಮಗಳನ್ನು ಮುಂದುವರೆಸಬೇಕು. ಕೋವಿಡ್ ಪರೀಕ್ಷೆ ಸಂಖ್ಯೆ ಹೆಚ್ಚಳ ಮಾಡಬೇಕು. ಕೋವಿಡ್ ವ್ಯಾಪಿಸದಂತೆ ಇನ್ನಷ್ಟು ಪರಿಣಾಮ ಕಾರಿಯಾಗಿ ಕಾರ್ಯ ನಿರ್ವಹಣೆಯಾಗ ಬೇಕು ಎಂದು ಉಸ್ತುವಾರಿ ಕಾರ್ಯದರ್ಶಿಯವರು ನಿರ್ದೇಶನ ನೀಡಿದರು.

ಕೋವಿಡ್ ಲಸಿಕೆ ನೀಡುವ ಕಾರ್ಯವು ಎಲ್ಲಾ ಕಡೆ ಹೆಚ್ಚು ನಡೆಯ ಬೇಕು. ಆಂದೋಲನ ಮಾದರಿಯಲ್ಲಿ ಲಸಿಕೆ ನೀಡುವ ಕೆಲಸವಾಗಬೇಕು. ಯಾರೊಬ್ಬರೂ ಲಸಿಕೆಯಿಂದ ವಂಚಿತರಾ ಗದಂತೆ ನೋಡಿಕೊಳ್ಳಬೇಕು. ಪ್ರತಿದಿನ ಹೆಚ್ಚು ಜನರಿಗೆ ಲಸಿಕೆ ಪಡೆಯಲು ಅಗತ್ಯ ವ್ಯವಸ್ಥೆ ಮಾಡುವ ಮೂಲಕ ಲಸಿಕಾ ಕಾರ್ಯದಲ್ಲಿ ಪ್ರಗತಿ ಸಾಧನೆ ಮಾಡಬೇಕು ಎಂದು ಉಸ್ತುವಾರಿ ಕಾರ್ಯದರ್ಶಿ ಬಿ.ಬಿ. ಕಾವೇರಿ ಅವರು ಸೂಚಿಸಿದರು.

ಜಿಲ್ಲಾಧಿಕಾರಿ ಡಾ. ಎಂ.ಆರ್. ರವಿ ಮಾತನಾಡಿ, ಸಂಭಾವ್ಯ ಕೋವಿಡ್ ಮೂರನೇ ಅಲೆ ವೇಳೆ ಮಕ್ಕಳ ಮೇಲೆ ಹೆಚ್ಚು ಪರಿಣಾಮ ಉಂಟಾಗಬಹುದೆಂಬ ತಜ್ಞರ ಅಭಿಪ್ರಾಯಗಳ ಹಿನ್ನೆಲೆಯಲ್ಲಿ ವಹಿಸಬೇಕಿರುವ ಮುಂಜಾಗ್ರತಾ ಕ್ರಮಗಳ ಸಂಬಂಧ ಈಗಾಗಲೆ ಸೂಚನೆ ನೀಡಲಾ ಗಿದೆ. ಆಸ್ಪತ್ರೆ, ಹಾಸಿಗೆಗಳ ಸೌಲಭ್ಯ, ಸೇವಾ ಚಿಕಿತ್ಸೆಗಳ ಬಗ್ಗೆಯೂ ಚರ್ಚಿಸಲಾಗಿದೆ. ಅಗತ್ಯ ವೈದ್ಯಕೀಯ ಪರಿಕರಗಳ ಖರೀದಿಗೂ ನಿರ್ದೇಶನ ನೀಡಲಾಗಿದೆ ಎಂದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾ ಹಕಾಧಿಕಾರಿ ಹರ್ಷಲ್ ಬೋಯರ್ ನಾರಾಯಣ ರಾವ್, ಹೆಚ್ಚುವರಿ ಜಿಲ್ಲಾಧಿಕಾರಿ ಎಸ್. ಕಾತ್ಯಾಯಿನಿ ದೇವಿ, ಉಪವಿಭಾಗಾಧಿಕಾರಿ ಡಾ. ಗಿರೀಶ್ ದಿಲೀಪ್ ಬದೋಲೆ, ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಗೂಡೂರು ಭೀಮಸೇನ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಂ.ಸಿ. ರವಿ, ಜಿಲ್ಲಾ ಆಸ್ಪತ್ರೆಯ ನೋಡಲ್ ಅಧಿಕಾರಿ ಡಾ. ಮಹೇಶ್, ಆರ್.ಸಿ.ಹೆಚ್. ಅಧಿಕಾರಿ ಡಾ. ವಿಶ್ವೇಶ್ವರಯ್ಯ, ಸರ್ವಲೆನ್ಸ್ ಅಧಿಕಾರಿ ಡಾ. ಅಂಕಪ್ಪ, ನೋಡಲ್ ಅಧಿಕಾರಿಗಳಾದ ಮಲೆಮಹದೇಶ್ವರ ವನ್ಯಜೀವಿ ವಿಭಾಗದ ಉಪಅರಣ್ಯ ಸಂರಕ್ಷಣಾಧಿಕಾರಿ ಏಡುಕೊಂಡಲು, ಬಿ.ಆರ್.ಟಿ ಹುಲಿ ಸಂರಕ್ಷಿತ ಪ್ರದೇಶದ ನಿರ್ದೇಶಕ ಡಾ. ಸಂತೋಷ್ ಕುಮಾರ್, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋ ಜನಾ ನಿರ್ದೇಶಕ ಕೆ. ಸುರೇಶ್, ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಹೊನ್ನೇಗೌಡ ಇತರರಿದ್ದರು.

## ಮಂತ್ರಾಲಯ: ಜೂ. 22ರಿಂದ ರಾಯರ ದರ್ಶನ ಪುನಾರಂಭ



ರಾಯಚೂರು: ಕೋವಿಡ್-19 ಎರಡನೇ ಅಲೆ ಹೆಚ್ಚಾಗಿದ್ದ ಕಾರಣ ಸ್ಥಗಿತಗೊಂಡಿದ್ದ ಮಂತ್ರಾಲಯದ ಶ್ರೀ ರಾಘವೇಂದ್ರ ಸ್ವಾಮಿಗಳ ಮೂಲ ಬೃಂದಾವನ ಜೂ.22ರಿಂದ ಪುನಾರಂಭ ಗೊಳ್ಳಲಿದೆ.

ಸರ್ಕಾರದ ಮಾರ್ಗಸೂಚಿಗಳನ್ವಯ ದರ್ಶನಕ್ಕೆ ಶ್ರೀ ಮಠದ ಆಡಳಿತ ಮಂಡಳಿ ಅವಕಾಶ ಮಾಡಿದೆ. ಬೆಳಗ್ಗೆ 6 ಗಂಟೆಯಿಂದ ಮಧ್ಯಾಹ್ನ 2 ಗಂಟೆವರೆಗೆ ಹಾಗೂ ಸಂಜೆ 4 ಗಂಟೆಯಿಂದ ರಾತ್ರಿ 9 ಗಂಟೆವರೆಗೆ ದರ್ಶನಕ್ಕೆ ಅವಕಾಶ ಕಲ್ಪಿಸಲಾಗಿದೆ.



ಮಂಡ್ಯ ತಾಲ್ಲೂಕು ಹೊಳಲು ಗ್ರಾಮದ ಗ್ರಾಮ ಪಂಚಾಯಿತಿ ಸ್ವಚ್ಚತಗಾರ (ಪೌರಕಾರ್ಮಿಕರಿಗೆ)ರಿಗೆ ಹೊಳಲು ಗ್ರಾಮದ ಹೆಚ್.ಎಲ್.ಶಿವಲಿಂಗಯ್ಯನವರು(ಕೆ.ಎಸ್.ಆರ್.ಟಿ.ಸಿ.ಸಂಚಾರ ನಿಯಂತ್ರಕರು ಪಾಂಡವಪುರ ಡಿಪೋ) ಫುಡ್‌ಕಿಟ್‌ನ್ನು ವಿತರಿಸಿ. ತಮ್ಮ ಕೈಲ್ಲಾದ ಅಳಿಲು ಸೇವೆಯನ್ನು ಮಾಡಿದ್ದೇನೆ ಎಂದರು. ಈ ಸಂದರ್ಭದಲ್ಲಿ ಯುವ ಮುಖಂಡರಾದ ಚೇತನ್, ಹೆಚ್.ಎನ್.ಶಿವಲಿಂಗ, ಮಾಜಿ ಗ್ರಾ ಪಂ .ಸದಸ್ಯರಾದ ಶಂಕರ್,ಹೆಚ್.ಎಲ್.ಶಿವರಾಜು ಹಾಜರಿದ್ದರು.

## ನಾಯಕತ್ವ ಬದಲಾವಣೆ ಬೇಡ, ಆದರೆ ಸಂಪುಟ ಪುನಾರಚನೆ ಮಾಡಿ !

ಬೆಂಗಳೂರು: ರಾಜ್ಯ ಬಿಜೆಪಿಯಲ್ಲಿ ಇಂದು ಭಾರೀ ಚಟುವಟಿಕೆಗಳು ನಡೆಯುತ್ತಿದೆ. ರಾಜ್ಯಕ್ಕೆ ಆಗಮಿಸಿರುವ ಉಸ್ತುವಾರಿ ಅರುಣ್ ಸಿಂಗ್ ಅವರೊಂದಿಗೆ ಶಾಸಕರು ಚರ್ಚೆ ನಡೆಸುತ್ತಿದ್ದಾರೆ. ಸುಮಾರು 30 ಮಂದಿ ಶಾಸಕರು ಅರುಣ್ ಸಿಂಗ್ ಅವರ ಭೇಟಿಗೆ ಸಮಯ ಕೇಳಿದ್ದು, ಒಬ್ಬರಾದ ಬಳಿಕ ಒಬ್ಬರಂತೆ ಭೇಟಿಯಾಗುತ್ತಿದ್ದಾರೆ.

ಅರುಣ್ ಸಿಂಗ್ ಅವರನ್ನು ಭೇಟಿಯಾಗಿರುವ ಶಾಸಕ ಎ.ಎಸ್. ಪಾಟೀಲ್ ನಡಹಳ್ಳಿ ಅವರು ಸಂಪುಟ ಪುನಾರಚನೆಗೆ ಬೇಡಿಕೆ ಇಟ್ಟಿದ್ದಾರೆ ಎಂದು ವರದಿಯಾಗಿದೆ.

ಉತ್ತರ ಕರ್ನಾಟಕ ಭಾಗದ ಕೆಲ ಶಾಸಕರ ಅಭಿಪ್ರಾಯವನ್ನು ಅರುಣ್ ಸಿಂಗ್ ಅವರಿಗೆ ತಿಳಸಿರುವ ನಡಹಳ್ಳಿ, ಮುಖ್ಯಮಂತ್ರಿ ಯಡಿಯೂರಪ್ಪ ಚೆನ್ನಾಗಿ ಕೆಲಸ ಮಾಡುತ್ತಿದ್ದಾರೆ. ನಾಯಕತ್ವ ಬಗ್ಗೆ ನಮ್ಮದೇನೂ ಪ್ರಶ್ನೆ ಇಲ್ಲ. ಆದರೆ ಸಂಪುಟದಲ್ಲಿ ಬೇರೆಯವರಿಗೂ ಅವಕಾಶ ಮಾಡಿಕೊಡಿ ಎಂದು ಹೇಳಿದ್ದಾರೆ.

ನಾಯಕತ್ವ ಬದಲಾವಣೆ ಮಾಡುವುದು ಬೇಡ, ಸಂಪುಟ ಪುನಾರಚನೆ ಮಾಡಿ, ಬೇರೆಯವರಿಗೆ ಅವಕಾಶ ನೀಡಿ ಸಾಮಾಜಿಕ ನ್ಯಾಯಕೊಡಿ. ಯಾವ ಸಮುದಾಯಕ್ಕೆ ಅವಕಾಶ ಸಿಕ್ಕಿಲ್ಲವೋ ಅವರಿಗೆ ಅವಕಾಶ ಮಾಡಿಕೊಡಿ ಎಂದು ಶಾಸಕ ಎ.ಎಸ್. ಪಾಟೀಲ್ ನಡಹಳ್ಳಿ ಹೇಳಿದ್ದಾರೆ.

## ಅತಿಥಿ ಶಿಕ್ಷಕರಿಗೆ : ಅರ್ಜಿ ಆಹ್ವಾನ

ಮಂಡ್ಯ : ಜಿಲ್ಲೆಯ ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆ ವತಿಯಿಂದ ಕಾರ್ಯ ನಿರ್ವಹಿಸುತ್ತಿರುವ ಶಾಲೆಗಳಲ್ಲಿ ಅತಿಥಿ ಶಿಕ್ಷಕರ ಹುದ್ದೆಗೆ ಅರ್ಜಿ ಆಹ್ವಾನಿಸಲಾಗಿದೆ.

ಈ ಸಂಬಂಧ ಮಂಡ್ಯ ಟೌನ್‌ನ ಮೌಲಾನ ಆಜಾದ್ ಮಾದರಿ ಆಂಗ್ಲ ಮಾಧ್ಯಮ ಶಾಲೆ ಹಾಗೂ ಮಳವಳ್ಳಿ ತಾಲ್ಲೂಕು ಕಲ್ಕುಣಿಯ ಮೌಲಾನ ಆಜಾದ ಮಾದರಿ ಆಂಗ್ಲ ಮಾಧ್ಯಮ ಶಾಲೆ, ಶ್ರೀರಂಗಪಟ್ಟಣದ ಸರ್ಕಾರಿ ಮುಸ್ಲಿಂ ವಸತಿ ಶಾಲೆ ,ಕೆ ಆರ್ ಪೇಟೆ ಟೌನ್ ನ ಅಲ್ಪಸಂಖ್ಯಾತರ ನವೋದಯ ಮಾದರಿ ಶಾಲೆ ಇಲ್ಲಿ ಹುದ್ದೆಗಳು ಖಾಲಿ ಇರುತ್ತವೆ.

ಈ ಹುದ್ದೆಗೆ ಬಿ.ಎ,ಬಿಕಾಂ, ಬಿಬಿಎಂ, ಬಿಎಸ್ಸಿ ಪದವಿ ಜೊತೆ ಬಿ.ಎಡ್ ಪದವಿ ಹೊಂದಿರುವ ಕನ್ನಡ, ಇಂಗ್ಲಿಷ್, ಉರ್ದು, ಹಿಂದಿ, ವಿಜ್ಞಾನ, ಸಮಾಜ ವಿಜ್ಞಾನ, ಗಣಿತ, ಕಂಪ್ಯೂಟರ್ ವಿಜ್ಞಾನ ಶಿಕ್ಷಕರ ಹುದ್ದೆಗಳಿಗೆ ಮೆರಿಟ್ ಹಾಗೂ ಅನುಭವಿ ಅರ್ಹ ಅಭ್ಯರ್ಥಿಗಳಿದ್ದ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತರು ತಮ್ಮ ಸ್ವ-ವಿವರವುಳ್ಳ ಮಾಹಿತಿಯನ್ನು ಅಗತ್ಯ ಧೃಡೀಕೃತ ಧಾಖಲೆಗಳೊಂದಿಗೆ ಜಿಲ್ಲಾ ಅಲ್ಪಸಂಖ್ಯಾತರ ಅಧಿಕಾರಿಗಳ ಕಛೇರಿ, ಬಿಸಿಲು ಮಾರಮ್ಮ ದೇವಸ್ಥಾನದ ಪಕ್ಕ ಕೆರೆ ಬೀದಿ, ನಾಗಮಂಗಲ ರಸ್ತೆ ಮಂಡ್ಯ ಇಲ್ಲಿಗೆ ಜೂನ್ 25 ರ ಒಳಗೆ ಸಲ್ಲಿಸಬಹುದಾಗಿದೆ ಹಾಗೂ ಮಾಹಿತಿಗಾಗಿ ದೂ.ಸಂ: 8618789652,9902844846 ನ್ನು ಸಂಪರ್ಕಿಸಬಹುದೆಂದು ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ತಿಳಿಸಿದ್ದಾರೆ.

## ರಾಜ್ಯಮಟ್ಟದ ಲೇಖನ ಮತ್ತು ಕವನ ಸ್ಪರ್ಧೆ

'ವಿಕಲಚೇತನರ ಊರುಗೋಲು' ಪತ್ರಿಕೆಯ ವತಿಯಿಂದ ಗಾನಯೋಗಿ ಪಂಡಿತ ಶ್ರೀ ಪುಟ್ಟರಾಜ ಗವಾಯಿಗಳ ಸ್ಮರಣಾರ್ಥ ವಿಕಲಚೇತನರನ್ನು ಕುರಿತಂತೆ ರಾಜ್ಯಮಟ್ಟದ ಲೇಖನ ಮತ್ತು ಕವನ ಸ್ಪರ್ಧೆಯನ್ನು ಏರ್ಪಡಿಸಿದೆ. ಕವನಗಳು 25 ಸಾಲುಗಳ ಮಿತಿಯಲ್ಲಿರಬೇಕು. ಲೇಖನಗಳು 4 ರಿಂದ 6 ಪುಟದೊಳಗಿರಬೇಕು. ಎರಡೂ ಸ್ಪರ್ಧೆಯಲ್ಲಿ ಆಯ್ಕೆಯಾದವರಿಗೆ ಪ್ರತ್ಯೇಕವಾಗಿ ಪ್ರಥಮ, ದ್ವಿತೀಯ, ತೃತೀಯ ಬಹುಮಾನಗಳನ್ನು ನೀಡಲಾಗುವುದು. ಜೊತೆಗೆ, ಭಾಗವಹಿಸುವ ಪ್ರತಿಯೊಬ್ಬರಿಗೂ ಪ್ರಶಸ್ತಿ ಪತ್ರ ಹಾಗೂ ನೆನಪಿನ ಕಾಣಿಕೆ ನೀಡಲಾಗುವುದು. ಈ ಸ್ಪರ್ಧೆಯಲ್ಲಿ ಎಲ್ಲಾ ವಯೋಮಾನದವರು ಭಾಗವಹಿಸಬಹುದಾಗಿದ್ದು, ಸಾಹಿತಿಗಳು, ವಿದ್ಯಾರ್ಥಿಗಳು, ಸಾರ್ವಜನಿಕರು, ವಿಕಲ ಚೇತನರೂ ತಮ್ಮ ಬರಹಗಳನ್ನು ಕಳುಹಿಸಬಹುದಾಗಿದೆ.





ಲೇಖನ ಮತ್ತು ಕವನಗಳ ವಸ್ತು ವಿಷಯವು ವಿಕಲಚೇತನರಿಗೆ ಮಾತ್ರ ಸಂಬಂಧಿಸಿರಬೇಕು. ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿ ಮಾದರಿ ಬದುಕು ನಡೆಸುತ್ತಿರುವ ವಿಕಲಚೇತನ ವ್ಯಕ್ತಿಗಳು, ಅವರ ಮುಂದಿರುವ ಸಮಸ್ಯೆ ಮತ್ತು ಸವಾಲುಗಳು, ವಿಕಲ ಚೇತನರಿಗಾಗಿ ದುಡಿಯುತ್ತಿರುವ ವಿಶೇಷ ಸ್ವಯಂಸೇವಾ ಸಂಸ್ಥೆಗಳನ್ನು ಕುರಿತಂತೆ ಹಾಗೂ ವಿಕಲ ಚೇತನರಿಗೆ ಸಂಬಂಧಿಸಿದ ಯಾವುದೇ ವಿಷಯದ ಬಗ್ಗೆ ಅತ್ಯುತ್ತಮ ಲೇಖನ ಮತ್ತು ಕವನಗಳನ್ನು ಹಾಗೂ ಅವುಗಳಿಗೆ ಸಂಬಧಿಸಿದ ಭಾವಚಿತ್ರವನ್ನು ಕಳುಹಿಸಿಕೊಡಬೇಕು. ಆಯ್ಕೆ ಸಮಿತಿಯ ತೀರ್ಮಾನವೇ ಅಂತಿಮವಾಗಿರುತ್ತದೆ.

ಬಹುಮಾನ ವಿಜೇತರಾದವರಿಗೆ ಬೆಂಗಳೂರಿನಲ್ಲಿ ಸೆಪ್ಟಂಬರ್ ತಿಂಗಳಲ್ಲಿ ನಡೆಯುವ ವಿಕಲ ಚೇತನರ ಊರುಗೋಲು ಪತ್ರಿಕೆಯ ರಾಜ್ಯ ಮಟ್ಟದ ವಿಕಲಚೇತನರ ಕುರಿತ ಚರ್ಚಾ ಸ್ಪರ್ಧೆ ಮತ್ತು ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಬಹುಮಾನ ವಿತರಿಸಲಾಗುವುದು. ಆಸಕ್ತರು 2021 ಆಗಸ್ಟ್ 31ರೊಳಗೆ ನಿಮ್ಮ ಇತ್ತೀಚಿನ ಭಾವಚಿತ್ರ ಮೊಬೈಲ್ ಸಂಖ್ಯೆ ಹಾಗು ಇ-ಮೇಲ್ ವಿಳಾಸ ಸಹಿತ ತಲುಪುವಂತೆ ನಮ್ಮ ವಾಟ್ಸಾಪ್ ನಂಬರ್ 9980306012 ಕ್ಕೆ ಅಥವಾ vikalachethanaraoorugolu@gmail.com E-ಮೇಲ್ ವಿಳಾಸಕ್ಕೆ ಕಳುಹಿಸಲು ಕೋರಿದೆ.

## ಟಿವಿಎಸ್ ಮೋಟಾರ್ ಕಂಪನಿ ತನ್ನ ಮೈಸೂರು ಕಾರ್ಖಾನೆಯಲ್ಲಿ ನೂರಾರು ಪ್ರಬೇಧಗಳ ಸುಸ್ಥಿರ ಸಹಬಾಳ್ವೆ ನೆಲೆ ಸೃಷ್ಟಿಸಿದೆ







ಮೈಸೂರು : ದ್ವಿಚಕ್ರ ಮತ್ತುತ್ರಿಚಕ್ರ ವಾಹನಗಳನ್ನು ಉತ್ಪಾದಿಸುವ ಪ್ರತಿಷ್ಠಿತ ಬ್ರಾಂಡ್ ಆಗಿರುವ ಟಿವಿಎಸ್ ಮೋಟಾರ್ ಕಂಪನಿಯು ತನ್ನ ಮೈಸೂರು ಫ್ಯಾಕ್ಟರಿ ಆವರಣ ವನ್ನು ಜೀವವೈವಿಧ್ಯ ಮತ್ತು ವನ್ಯಜೀವಿಗಳನ್ನು ಸಂರಕ್ಷಿಸುವ ಸಲುವಾಗಿ ಬಳಸಿಕೊಳ್ಳುವ ಮೂಲಕ ಪ್ರಭಾವಿ ಉದಾಹರಣೆಯಾಗಿ ರೂಪು ಗೊಂಡಿದೆ. ಕಳೆದ 20 ವರ್ಷಗಳಿಂದ, ಕಂಪನಿ 40 ಎಕರೆ 'ಪವಿತ್ರಅರಣ್ಯ' ವನ್ನು ಪೋಷಿಸಿಕೊಂಡು ಬಂದಿದ್ದು, ಇದನ್ನು ವನ್ಯಜೀ ವಿಗಳ ವಾಸಕ್ಕೆ ಅನುಕೂಲ ಕರವಾಗಿ ಪರಿವರ್ತಿಸಿದೆ. ಫ್ಯಾಕ್ಟರಿಯ ಸುತ್ತಮುತ್ತಲ ಪ್ರದೇಶವನ್ನು ಸಮೃದ್ಧ ಸಸ್ಯ ಮತ್ತು ಪ್ರಾಣಿ ಪ್ರಬೇಧದ ಆವಾಸಸ್ಥಾನವಾಗಿ ಅಭಿವೃದ್ಧಿಪಡಿಸಿದೆ.

ಟಿವಿಎಸ್ ಮೋಟಾರ್ ಕಂಪನಿಯ ಅಧ್ಯಕ್ಷರಾದ ಶ್ರೀ ವೇಣು ಶ್ರೀನಿವಾಸನ್ ಅವರ ದೂರದೃಷ್ಟಿ ಮತ್ತು ಮಾರ್ಗದರ್ಶನದಡಿ ಕಂಪನಿಯು ಮೈಸೂರು ಕಾರ್ಖಾನೆಯ ಸುತ್ತಮುತ್ತಲಿನ ಪ್ರದೇಶದಲ್ಲಿಜೀವವೈವಿಧ್ಯ ಮತ್ತು ವನ್ಯಜೀವಿಗಳನ್ನು ಸಂರಕ್ಷಿಸುವ ನಿಟ್ಟಿನಲ್ಲಿ ಪರಿಣಾಮಕಾರಿ ಮತ್ತು ಸಕ್ರಿಯ ಕ್ರಮಗಳನ್ನು ಕೈಗೊಂಡಿದೆ. 1999ರಲ್ಲಿ ಈ ಪರಿಕಲ್ಪನೆಯನ್ನು ಅನುಷ್ಠಾನಕ್ಕೆ ತರಲಾಗಿದ್ದು, ಇಂದು 158 ಸಸ್ಯಪ್ರಬೇಧಗಳು ಮತ್ತು 290 ಪ್ರಾಣಿ ಪ್ರಬೇಧಗಳು ಇಲ್ಲಿವೆ. ಆರಂಭದಿಂದಲೂ ಕಂಪನಿಯು 45 ಸಾವಿರಕ್ಕೂಅಧಿಕ ಗಿಡಗಳನ್ನು ಅರಣ್ಯದಲ್ಲಿ ಬೆಳೆಸಿದ್ದು, ಕಳೆದ ಎರಡು ವರ್ಷದಲ್ಲಿ 5000 ಕ್ಕೂ ಹೆಚ್ಚು ಗಿಡಗಳನ್ನು ನೆಟ್ಟು ಬೆಳೆಸಿದೆ.

ಟಿವಿಎಸ್ ಮೋಟಾರ್‌ನ ಮೈಸೂರು ಕಾರ್ಖಾನೆಯಲ್ಲಿ ಪಕ್ಷಿಧಾಮ, ಆಕರ್ಷಕ ಚಿಟ್ಟೆಗಳ ಉದ್ಯಾನ, ಸಸ್ಯಶಾಸ್ತ್ರಉದ್ಯಾನವನ, ಸಾವಯವಕಾಂಪೋಸ್ಟ್‌ಕೇಂದ್ರ ಮತ್ತುಐದು ಕೆರೆಗಳಿವೆ. ಈ ಅರಣ್ಯವು ನೂರಾರು ನವಿಲು, ಗೂಬೆ, ವೈವಿಧ್ಯಮಯ ನೀರು ಹಕ್ಕಿಗಳು, ಹಾವುಗಳು, ಪುನುಗುಬೆಕ್ಕು, ಅಳಿಲುಗಳು ಮತ್ತಿತರ ಪ್ರಾಣಿ ಪಕ್ಷಿಗಳ ಸಂಕುಲವನ್ನು ಹೊಂದಿದೆ. ಈ ಫ್ಯಾಕ್ಟರಿಆವರಣವು ಉದ್ಯೋಗಿಗಳಿಗೆ ಆಕರ್ಷಕ ಮತ್ತು ಮತ್ತೆ ಮತ್ತೆನೋಡಬೇಕೆನ್ನುವತಾಣವಾಗಿಅಭಿವೃದ್ಧಿಯಾಗಿದ್ದು, ಉದ್ಯೋಗಿಗಳು ಆವರಣಕ್ಕೆ ಪ್ರವೇಶಿಸುತ್ತಿದ್ದಂತೆಯೇ ನರ್ತಿಸುವ ನವಿಲುಗಳು, ಹಚ್ಚ ಹಸಿರನ್ನು ಕಂಡು ಮುದಗೊಳ್ಳುವ ವಾತಾವರಣ ಇದೆ. ಇದುಅಕ್ಷರಶಃ ಸುಮಧುರ ಸಹಬಾಳ್ವೆಯ ಮಹತ್ವವನ್ನು ಸಾರುತ್ತದೆ. ಇದು ತಾಜಾ ನೀರಿನ ಆಮೆ, ಕೌಜಗ, ಮುಂಗುಸಿ, ಪತಂಗಗಳು ಮತ್ತುಇತರ ಹಲವು ಜೀವಜಂತುಗಳ ಸಂತಾನೋತ್ಪತ್ತಿತಾಣವೂ ಆಗಿದೆ. ಒಣ ಪೊದೆಗಳ ವಾಸತಾಣವನ್ನು ಆವರಣ ದೊಳಗೆ ಅಭಿವೃದ್ಧಿಪಡಿಸಲಾಗಿದ್ದು, ಇದು ವಾಸತಾಣ ವೈವಿಧ್ಯತೆಯನ್ನು ಮತ್ತಷ್ಟು ಹೆಚ್ಚಿಸಿದೆ. ಉತ್ಪಾದನಾಉದ್ಯಮದ ಒಳಗೆ ಅಪರೂಪದ ಪರಿಸರಕ್ಕೆ ಇದು ಸಾಕ್ಷಿಯಾಗಿದೆ.

ಸ್ಥಳೀಯ ಪ್ರಬೇಧದ ಗಿಡಮರಗಳನ್ನು ನೆಟ್ಟು ಪೋಷಿಸಲು ಕಂಪನಿ ಕ್ರಮಗಳನ್ನು ಕೈಗೊಂಡಿದ್ದು, ಹಾಲಿ ಇರುವ ವಾಸತಾಣವನ್ನು ವಿಸ್ತೃತಪಡಿಸುವ ನಿಟ್ಟಿನಲ್ಲಿ ಕೊಳಗಳಿಂದ ನಿರಂತರ ನೀರು ಸರಬರಾಜನ್ನು ಖಾತರಿಪಡಿಸಲಾಗಿದೆ. ಹೆಚ್ಚುವರಿ ನೀರು ಹಿಡಿದಿಡುವ ಸಲುವಾಗಿ ಹೊಸ ಕೊಳಗಳನ್ನು ಅಭಿವೃದ್ಧಿ ಪಡಿಸಲಾಗಿದೆ. ಇದರಜತೆಗೆ ಕೊಳಗಳಲ್ಲಿ ಪಾಚಿಗಟ್ಟುವಿಕೆಯನ್ನುತಡೆಯುವ ಸಲುವಾಗಿ ಕೊಳಗಳನ್ನು ನಿಯತವಾಗಿ ಸ್ವಚ್ಛಗೊಳಿಸಲಾಗುತ್ತಿದೆ ಹಾಗೂ ನೀರಿನಡಿ-ಆಕ್ಸಿಜನೇಶನ್ ಪ್ರಕ್ರಿಯೆಯನ್ನು ನಿರ್ವಹಿಸಲಾಗುತ್ತಿದೆ. ಉದ್ದವಾದ ಕೊಳಗಳಲ್ಲಿ ಆರೋಗ್ಯಕರ ಮಟ್ಟದಆಮ್ಲಜನಕ ಕರಗುವಿಕೆಯನ್ನುಖಾತರಿಪಡಿಸುವ ಸಲುವಾಗಿ ನಿರಂತರವಾಗಿ ಗಾಳಿಯಾಡಿಸುವ ಪ್ರಕ್ರಿಯೆಯನ್ನೂ ನಡೆಸಲಾಗುತ್ತಿದೆ. ಹಕ್ಕಿಗಳ ಪ್ರಯೋಜನಕ್ಕಾಗಿ ಮೀನು ಮತ್ತು ಬಸವನಹುಳದಂಥ ಬೇಟೆ ಪ್ರಬೇಧಗಳನ್ನು ಕೂಡಾ ಕೊಳಗಳಿಗೆ ನಿಯತವಾಗಿ ಬಿಡಲಾಗುತ್ತಿದೆ.

ಪೂರ್ಣಾವಧಿ ಪರಿಸರತಜ್ಞರು ಈ ಜಲತಾಣ ಮತ್ತುಅರಣ್ಯ ಪ್ರದೇಶದ ಮೇಲ್ವಿಚಾರಣೆಯನ್ನು ನೋಡಿಕೊಳ್ಳುತ್ತಾರೆ ಹಾಗೂ ಈ ಪ್ರಾಕೃತಿಕ ವಲಯವನ್ನು ಅಭಿವೃದ್ಧಿಪಡಿಸುವ ಮತ್ತು ನಿರ್ವಹಿಸುವ ನಿಟ್ಟಿನಲ್ಲಿತಜ್ಞರನ್ನು ಸಂಪರ್ಕಿಸಲಾಗುತ್ತಿದೆ. ಸುರಕ್ಷಾತ್ಮಕಕ್ರಮವಾಗಿ, ಅರಣ್ಯ ಪ್ರದೇಶದಲ್ಲಿಯಾವುದೇ ತ್ಯಾಜ್ಯವನ್ನು ಎಸೆಯಲು ಅಥವಾತ್ಯಾಜ್ಯವನ್ನು ಹೊತ್ತಿಸಲು ಅನುಮತಿಸಲಾಗುತ್ತಿಲ್ಲ. ಜೊತೆಗೆ ಅರಣ್ಯ ಉತ್ಪನ್ನಗಳನ್ನು ಸಂಗ್ರಹಿಸಲು ಅನುಮತಿಸಿಲ್ಲ. ಕಾರ್ಖಾನೆಯ ನಿಯಮಾವಳಿಗಳು ಸಹಜ ನೆಲೆಯನ್ನು ಹಾಳುಮಾಡಬಹುದಾದ ಅಥವಾ ಕೆಡಿಸಬಹುದಾದ ಯಾವುದೇ ವಾಯು ಮಾಲಿನ್ಯಕ್ಕೆ ಮತ್ತು ಕೊಳಕು ನೀರಿಗೆ ಅವಕಾಶ ನೀಡುತ್ತಿಲ್ಲ.

ಪ್ರತಿ ವರ್ಷ ಹಸಿರು ಹೊದಿಕೆಯನ್ನು ವಿಸ್ತೃತಗೊಳಿಸಲು ಕಂಪನಿ ಬದ್ಧವಾಗಿದ್ದು, ಇಡೀ ಪರಿಸರವನ್ನು ಸುಸ್ಥಿರವಾಗಿ ಕಾಪಾಡುವ ಮೂಲಕ ಹೆಚ್ಚು ಪ್ರಾಣಿ ಪಕ್ಷಿಗಳನ್ನು ಆಕರ್ಷಿಸುತ್ತಿದೆ. ಟಿವಿಎಸ್ ಮೋಟಾರ್ ಕಂಪನಿ ಕೈಗೊಂಡ ನಿಯತ ಹಸ್ತಕ್ಷೇಪದ ಮೂಲಕ ಈ ದಶಕದ ವಿಶ್ವ ಪರಿಸರ ದಿನಾಚರಣೆಯ ಧ್ಯೇಯವಾಕ್ಯವೆನಿಸಿದ "ಪರಿಸರ ಪುನರುತ್ಥಾನ"ಕ್ಕೆಅನುಸಾರವಾಗಿ ಸಣ್ಣದಾದರೂ ಧನಾತ್ಮಕ ಪರಿಣಾಮಕ್ಕೆಉತ್ತಮ ನಿದರ್ಶನವಾಗಿದೆ. ಮುಂದಿನ ಪೀಳಿಗೆಗೆ ಉತ್ತಮ ಪರಿಸರದ ಬ್ಯಾಟನ್ ಹಸ್ತಾಂತರಿಸುವ ಉದ್ದೇಶದಿಂದ, ಕಂಪನಿಯು "ಗ್ರೀನಿಂಗ್ ಮೈಂಡ್" ಎಂಬ ಶಿಕ್ಷಣ ಕಾರ್ಯಕ್ರಮವನ್ನು ಕೂಡಾ ಆರಂಭಿಸಿದೆ. ಇದರಡಿ ವ್ಯವಸ್ಥಿತ ಮತ್ತು ಪಠ್ಯಕೇಂದ್ರಿತ ತರಗತಿಗಳನ್ನು (ಒಳಾಂಗಣ ಹಾಗೂ ಹೊರಾಂಗಣ ಒಳಗೊಂಡಂತೆ) ಹತ್ತಿರದ ಗ್ರಾಮಗಳ ವಿದ್ಯಾರ್ಥಿಗಳಿಗಾಗಿ ನಡೆಸಲಾಗುತ್ತಿದೆ.

ಕ್ರಾಂತಿಯಕಿಡಿ
ಶುಕ್ರವಾರ
18 ಜೂನ್ 2021
ಕಾಯಕಯೋಗಿ
KAYAKAYOGI-MORNING DAILY
ಕನ್ನಡ ದಿನಪತ್ರಿಕೆ


## ಹೆಚ್ ವಿಶ್ವನಾಥ್ ಒಬ್ಬ ಹುಚ್ಚ. ಅವರ ಆರೋಗ್ಯ ತಪಾಸಣೆ ಮಾಡಿಸಬೇಕು: ಎಸ್ .ಆರ್. ವಿಶ್ವನಾಥ್




ಬೆಂಗಳೂರು: ಎಚ್.ವಿಶ್ವನಾಥ್ ಒಬ್ಬ ಹುಚ್ಚ, ಅವರನ್ನು ಮೊದಲು ಆಸ್ಪತ್ರೆಗೆ ಸೇರಿಸಬೇಕು. ಉಂಡ ಮನೆಗೆ ಎರಡು ಬಗೆಯುವ ಬುದ್ದಿ ಅವರದ್ದು, ರಸ್ತೆಯಲ್ಲಿ ಅರೆ ಹುಚ್ಚರ ರೀತಿ ಓಡಾಡುವವರ ರೀತಿ ವಿಶ್ವನಾಥ್ ಆಗಿ ದ್ದಾರೆ. ಅವರನ್ನು ಮಾನಸಿಕ ಆಸ್ಪತ್ರೆಗೆ ಸೇರಿಸಿ, ತಪಾಸಣೆ ಮಾಡಿಸಬೇಕು ಎಂದು ಮನವಿ ಮಾಡುತ್ತೇನೆ ಎಂದು ಶಾಸಕ ಎಸ್. ಆರ್‌ವಿಶ್ವನಾಥ್ ವಾಗ್ದಾಳಿ ನಡೆಸಿದರು.

ಸಿಎಂ ಬದಲಾವಣೆ ಆಗಬೇಕು ಎಂಬ ವಿಶ್ವನಾಥ್ ಹೇಳಿಕೆಗೆ ಪ್ರತಿಕ್ರಿಯೆ ನೀಡಿದ ಅವರು, ಅವರು ಏನು ಮಾತಾಡುತ್ತಿದ್ದಾರೆ ಎಂಬುದರ ಬಗ್ಗೆ ಅವರಿಗೆ ಗೊತ್ತಿಲ್ಲ. ಯಡಿಯೂರಪ್ಪನವರಿಗೆ ವಯಸ್ಸಾಗಿರಬಹುದು ಆದರೆ ಅವರ ಮಾನಸಿಕ ನಿರ್ಧಾರಗಳು ಧೃಡವಾಗಿವೆ ಎಂದರು. ಬಿಜೆಪಿಗೆ ಒಬ್ಬರೇ ವಿಶ್ವನಾಥ್ ಸಾಕಾಗಿತ್ತು, ಆದರೇನು ಮಾಡುವುದು, ಬೇರೆಯವರ ಜೊತೆ ಬಂದಾಗ ಬೇಡ ಎನ್ನಲಾಗುವುದಿಲ್ಲ. ಹೀಗಾಗಿ ಅವರನ್ನು ಪಕ್ಷಕ್ಕೆ ಕರೆದುಕೊಂಡು ತಪ್ಪಾಗಿದೆ ಎಂದು ವಾಗ್ದಾಳಿ ನಡೆಸಿದರು.

# ಕೊರೊನಾ 2ನೇ ಅಲೆಯಿಂದ 2 ಲಕ್ಷ ಕೋಟಿ ಉತ್ಪಾದನಾ ನಷ್ಟ


ನವದೆಹಲಿ: ಕೊರೋನಾ ಎರಡನೇ ಅಲೆಯ ಹೊಡೆತ ಎಲ್ಲಾ ಕ್ಷೇತ್ರಗಳ ಮೇಲೆ ತೀವ್ರವಾಗಿದೆ. ಇದರಿಂದಾಗಿ ಪ್ರಸಕ್ತ ಹಣಕಾಸು ವರ್ಷದಲ್ಲಿ 2 ಲಕ್ಷ ಕೋಟಿ ರೂಪಾಯಿಗಳು ನಷ್ಟವಾಗಿದೆ ಎಂದು ಅಂದಾಜಿಸಬಹುದು ಎಂದು ರಿಸರ್ವ್ ಬ್ಯಾಂಕ್ ಆಫ್ ಇಂಡಿಯಾ ಅಂದಾಜಿಸಿದೆ.

ಈ ತಿಂಗಳ ಮಾಸಿಕ ಬುಲೆಟಿನ್ ನಲ್ಲಿ ಆರ್ ಬಿಐ, ಕೊರೋನಾ ವೈರಸ್ ನ ನಿರ್ಬಂಧದಿಂದಾಗಿ ಸಣ್ಣ ನಗರಗಳಿಗೆ ಮತ್ತು ಗ್ರಾಮಗಳಲ್ಲಿ ಕೂಡ ಬೇಡಿಕೆ ಕಡಿತಗೊಂಡಿದೆ. ಭಾರತದ ಆರ್ಥಿಕತೆ ಸಾಂಕ್ರಾಮಿಕದ ಎರಡನೇ ಅಲೆಯೊಂದಿಗೆ ಸೆಣಸಾಡುತ್ತಿದೆ ಎಂದು ಹೇಳಿದೆ.

ಹಣಕಾಸು ವರ್ಷ 2021ರ ಮೊದಲ ತ್ರೈಮಾಸಿಕದಲ್ಲಿ ಶೇ. 24ರಷ್ಟು ಅಂದರೆ ರಾಷ್ಟ್ರೀಯ ಉತ್ಪಾದನೆಯಲ್ಲಿ 11 ಲಕ್ಷ ಕೋಟಿ ರೂಪಾಯಿ ನಷ್ಟವುಂಟಾಗಬಹುದು ಅಂದಾಜಿಸಲಾಗಿದ್ದು, ಆರ್ಥಿಕ ತಜ್ಞರ ಅಂದಾಜಿಗಿಂತ 5–6 ಲಕ್ಷ ಕಡಿಮೆಯಾಗಿದೆ. ಎಸ್‌ಬಿಐ ರಿಸರ್ಚ್ ಪ್ರಸಕ್ತ ತ್ರೈಮಾಸಿಕದ ಜಿಡಿಪಿ ನಷ್ಟವನ್ನು 6 ಲಕ್ಷ ಕೋಟಿ ರೂ ಎಂದು ಪರಿಗಣಿಸಿದರೆ, ಬಾರ್ಕ್ಲೇಸ್ ಇದನ್ನು 5.4 ಲಕ್ಷ ಕೋಟಿ ರೂ ಎಂದು ಅಂದಾಜಿಸಿದೆ, ಲಾಕ್‌ಡೌನ್ ಜೂನ್ ಅಂತ್ಯದವರೆಗೆ ಮುಂದುವರಿಯಬಹುದು.

ದೇಶೀಯ ಬೇಡಿಕೆಯಲ್ಲಿ ತೀವ್ರ ಹೊಡೆತ ಬಿದ್ದರೂ, ಒಟ್ಟಾರೆ ಪೂರೈಕೆಯ ಪರಿಸ್ಥಿತಿ ಸಮಾಧಾನಕರವಾಗಿದೆ. ಕೃಷಿ ಮತ್ತು ಸಂಪರ್ಕವಿಲ್ಲದ ಸೇವೆಗಳು ಮಾರುಕಟ್ಟೆ ಸ್ಥಿತಿ ಯನ್ನು ಹಿಡಿದಿಟ್ಟುಕೊಂಡಿವೆ. ಕೋವಿಡ್ ನಿರ್ಬಂಧಗಳ ಮಧ್ಯೆ ಕೈಗಾರಿಕೆ ಉತ್ಪಾದನೆ ಮತ್ತು ರಫ್ತು ಹೆಚ್ಚಾಗಿದೆ ಎಂದು ಆರೋ ಬಿಐ ತಿಳಿಸಿದೆ.

ದೇಶದ ನಾಗರಿಕರಿಗೆ ಲಸಿಕೆ ನೀಡುವ ಪ್ರಮಾಣವು ಆರ್ಥಿಕ ವ್ಯವಸ್ಥೆ ಚೇತರಿಕೆ ಮೇಲೆ ಪ್ರಮುಖ ಪರಿಣಾಮ ಬೀರುತ್ತದೆ ಎಂದು ಆರ್ ಬಿಐ ಹೇಳಿದೆ.

## ರಾಜ್ಯಕ್ಕೆ ಸುಭದ್ರ ಸರ್ಕಾರ ಬೇಕು; ಸಿಎಂರನ್ನು ಇಟ್ಕೊಳ್ತೀರ, ಕಿತ್ತು ಹಾಕ್ತೀರ, ಬೇಗ ನಿರ್ಧರಿಸಿ




ಬೆಂಗಳೂರು: ಕೊರೋನಾ ಎರಡನೇ ಅಲೆಗೆ ತೀವ್ರವಾಗಿ ಸಿಲುಕಿ ಜನರು ಪರಿತಪಿಸುತ್ತಿರುವ ಸಂದರ್ಭದಲ್ಲಿ ರಾಜ್ಯಕ್ಕೆ ಸುಭದ್ರ ಸರ್ಕಾರದ ಅವಶ್ಯಕತೆಯಿದೆ. ಸರ್ಕಾರ ಈ ಸಮಯದಲ್ಲಿ ಜನರ ಪರವಾಗಿ ಗಟ್ಟಿಯಾಗಿ ನಿಲ್ಲಬೇಕು. ಅದು ಬಿಟ್ಟು ಬಿಜೆಪಿ ನಾಯಕರು ತಮ್ಮ ತಮ್ಮೊಳಗೆ ಗುಂಪು ರಾಜಕೀಯ ಮಾಡುವುದು, ಅಧಿಕಾರಕ್ಕಾಗಿ ಕಿತ್ತಾಟ ನಡೆಸುವುದು, ಪದೇ ಪದೇ ಮುಖ್ಯಮಂತ್ರಿ ಬದಲಾವಣೆ ಮಾತುಗಳು ಎಷ್ಟು ಸರಿ ಎಂದು ಪ್ರತಿಪಕ್ಷ ನಾಯಕ ಸಿದ್ದರಾಮಯ್ಯ ಪ್ರಶ್ನೆ ಮಾಡಿದ್ದಾರೆ.

ರಾಜ್ಯ ಬಿಜೆಪಿ ನಾಯಕರೊಳಗಿನ ಬಹಿರಂಗ ಕಿತ್ತಾಟವನ್ನು ಶಮನಗೊಳಿಸಲು ಇದೀಗ ಸ್ವತಃ ರಾಜ್ಯ ಉಸ್ತುವಾರಿ ಅರುಣ್ ಸಿಂಗ್ ಬಂದಿದ್ದಾರೆ. ಈ ಹೊತ್ತಿನಲ್ಲಿ ಟ್ವೀಟ್ ಮಾಡಿರುವ ಸಿದ್ದರಾಮಯ್ಯ, ಸಿಎಂ ಯಡಿಯೂರಪ್ಪರನ್ನು ಇಟ್ಟುಕೊಳ್ತೀರಾ? ಕಿತ್ತುಹಾಕ್ತೀರಾ? ಇದು ಬಿಜೆಪಿಗೆ ಸಂಬಂಧಿಸಿದ ವಿಚಾರ. ಆದರೆ, ಶೀಘ್ರ ಈ ಬಗ್ಗೆ ನಿರ್ಧಾರ ಕೈಗೊಳ್ಳಿ ಎಂದು ಹೇಳಿದ್ದಾರೆ.

ಶೀಘ್ರ ನಿರ್ಧಾರಕ್ಕೆ ಬಂದು ರಾಜ್ಯಕ್ಕೊಂದು ಸುಭದ್ರ ಸರ್ಕಾರ ಕೊಡಿ. ಇಲ್ಲದಿದ್ದರೆ ರಾಜೀನಾಮೆ ಕೊಟ್ಟು ತೊಲಗಿ. ಪಕ್ಷಾಂತರಿಗಳ ಅನೈತಿಕ ಬಲದಿಂದ ಬಿಜೆಪಿ ಕರ್ನಾಟಕದಲ್ಲಿ ಅಧಿಕಾರ ಅನುಭವಿಸುತ್ತಿದೆ. ಮೂಲ ನಾಯಕರು ಈಗ ಅವರ ವಿರುದ್ಧವೇ ತಿರುಗಿ ಬಿದ್ದಿದ್ದಾರೆ. ಈಗಲೂ ಕಾಲ ಮಿಂಚಿಲ್ಲ, ಇಂಥ ಅನೈತಿಕ ಬೆಂಬಲ ಬೇಡವಾದ್ರೆ. ಪಕ್ಷಾಂತರಿಗಳನ್ನು ಕಿತ್ತು ಹಾಕಿ, ಯಾಕೆ ಗೋಳಾಡುತ್ತೀರಿ? ಎಂದು ಪ್ರತಿಪಕ್ಷ ನಾಯಕ ಸಿದ್ದರಾಮಯ್ಯ ಟ್ವೀಟ್ ಮಾಡಿದ್ದಾರೆ.

## ಮನ್‌ಮುಲ್‌ನಲ್ಲಿ ನೀರು–ಹಾಲು ಹಗರಣ: ತಪ್ಪಿತಸ್ಥರ ವಿರುದ್ಧ ಕಠಿಣ ಕಾನೂನು ಕ್ರಮ ಜರುಗಿಸಿ



ಮಂಡ್ಯ ಜಿಲ್ಲಾ ಹಾಲು ಒಕ್ಕೂಟದ ಮಾಜಿ ಅಧ್ಯಕ್ಷ ಎಂ.ಬಿ.ಹರೀಶ್ ಅವರು ಕೆ.ಆರ್.ಪೇಟೆ ಪ್ರವಾಸಿ ಮಂದಿರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡುತ್ತಿರುವುದು.

ಕೆ.ಆರ್.ಪೇಟೆ: ಮಂಡ್ಯ ಜಿಲ್ಲಾ ಹಾಲು ಒಕ್ಕೂಟದಲ್ಲಿ (ಮನ್‌ಮುಲ್) ನಡೆದಿರುವ ನೀರು–ಹಾಲು ಹಗರಣವನ್ನು ರಾಜ್ಯ ಸರ್ಕಾರವು ಸಿಬಿಐ ತನಿಖೆಗೆ ತಪ್ಪಿಸಬೇಕು. ಈ ಬಹು ಕೋಟಿ ಹಗರಣದಲ್ಲಿ ಪಾಲ್ಗೊಂಡಿರುವ ಎಲ್ಲಾ ತಪ್ಪಿತಸ್ಥರ ವಿರುದ್ಧ ಕಠಿಣ ಕಾನೂನು ಕ್ರಮ ಜರುಗಿಸಬೇಕು ಎಂದು ಮಂಡ್ಯ ಜಿಲ್ಲಾ ಹಾಲು ಒಕ್ಕೂಟದ ಮಾಜಿ ಅಧ್ಯಕ್ಷ ಎಂ.ಬಿ.ಹರೀಶ್ ಅವರು ಒತ್ತಾಯಿಸಿದ್ದಾರೆ.

ಕೆ.ಆರ್.ಪೇಟೆ ಪ್ರವಾಸಿ ಮಂದಿರದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ ಸಿಬಿಐ ತನಿಖೆಗೆ ಆಗ್ರಹಿಸಿದರು. ಕಳೆದ ಸಾಲಿನ ಮನ್ ಮುಲ್ ಆಡಳಿತ ಮಂಡಳಿಯ ವತಿಯಿಂದ 78 ಕೋಟಿ ರೂಪಾಯಿಗಳ ಅವ್ಯವಹಾರ ನಡೆದಿದೆ. ಈ ಬಾಬ್ತಿನ ಹಣವನ್ನು ಆಡಳಿತ ಮಂಡಳಿಯಿಂದಲೇ ವಸೂಲಿ ಮಾಡಿ ಒಕ್ಕೂಟದ ಖಾತೆಗೆ ಜಮಾ ಮಾಡಬೇಕು ಎಂದು ಸರ್ಕಾರದ ಅಧಿಕಾರಿಗಳೇ ವರದಿ ನೀಡಿದ್ದರೂ ಯಾವುದೇ ಕ್ರಮಕೈಗೊಂಡಿಲ್ಲ. ಆದ್ದರಿಂದ ಪ್ರಸ್ತುತ ನಡೆದಿರುವ ಹಾಲಿಗೆ ನೀರು ಬೆರೆಸಿರುವ ಭಾರೀ ಮಟ್ಟದ ಹಗರಣವನ್ನು ಕಾವು ಆರುವ ಮುನ್ನವೇ ಸತ್ಯ ಹೊರಬಂದು ತಪ್ಪಿತಸ್ಥರಿಗೆ ಶಿಕ್ಷೆಯಾಗಬೇಕಾದರೆ ಸಿಬಿಐ ತನಿಖೆಯಿಂದ ಮಾತ್ರ ಸತ್ಯಾಂಶವು ಹೊರಬರಲು ಸಾಧ್ಯವಿದೆ ಎಂದು ಆಗ್ರಹಿಸಿದ ಹರೀಶ್ ಈಗಾಗಲೇ ರೈತರ ಜೀವನಾಡಿಗಳಾಗಿರುವ ಮೈಷುಗರ್ ಮತ್ತು ಪಾಂಡವಪುರ ಸಹಕಾರ ಸಕ್ಕರೆ ಕಾರ್ಖಾನೆಗಳು ಬಾಗಿಲು ಮುಚ್ಚಿದ್ದು ರೈತರ ಬದುಕು ಮೂರಾಬಟ್ಟೆಯಾಗಿದೆ. ಮಂಡ್ಯ ಹಾಲು ಒಕ್ಕೂಟದಲ್ಲಿ ನಡೆಯುತ್ತಿರುವ ಬ್ರಹ್ಮಾಂಡ ಭ್ರಷ್ಟಾಚಾರದಿಂದಾಗಿ ಒಕ್ಕೂಟವು ಬಾಗಿಲು ಮುಚ್ಚಿದರೆ ಗ್ರಾಮೀಣ ಪ್ರದೇಶದ ಬಡಜನರ ನೆಮ್ಮದಿಯ ಜೀವನಕ್ಕೆ ಭಂಗ ತರಲಿದೆ. ಆದ್ದರಿಂದ ಕೂಡಲೇ ಸತ್ಯಾಂಶವನ್ನು ಹೊರತಂದು ತಪ್ಪಿತಸ್ಥರಿಗೆ ತಕ್ಕ ಶಾಸ್ತಿ ಮಾಡಬೇಕು ಎಂದು ಹರೀಶ್ ಒತ್ತಾಯಿಸಿದರು.

ನಾನೂ ಕೂಡ ಮಂಡ್ಯ ಜಿಲ್ಲಾ ಹಾಲು ಒಕ್ಕೂಟದ ಅಧ್ಯಕ್ಷನಾಗಿ ಏಳು ವರ್ಷಗಳ ಕಾಲ ಕೆಲಸ ಮಾಡಿದ್ದೇನೆ. ನನ್ನಂತೆಯೇ ಶ್ರೀರಂಗಪಟ್ಟಣದ ಬೋರೇಗೌಡರು ಕೂಡ ಅಧ್ಯಕ್ಷರಾಗಿ ಕೆಲಸ ಮಾಡಿ ಈಗಲೂ ಹಾಲಿ ನಿರ್ದೇಶಕರಾಗಿ ಕಳೆದ 17 ವರ್ಷಗಳಿಂದ ಕೆಲಸ ಮಾಡುತ್ತಿದ್ದಾರೆ. ಅವರು ಪ್ರಸ್ತುತ ನಡೆದಿರುವ ಭ್ರಷ್ಟಾಚಾರದ ಬಗ್ಗೆ ಮಾತನಾಡದೇ ಮೌನವಾಗಿದ್ದಾರೆ. ನನ್ನ ಕಾಲದಲ್ಲಿ ಮನ್‌ಮುಲ್ ಅಭಿವೃದ್ಧಿಗೆ, ಟೆಟ್ರಾ ಪ್ಯಾಕ್ ಘಟಕದ ನಿರ್ಮಾಣಕ್ಕೆ, ಹಾಲು ಒಕ್ಕೂಟದ ಉತ್ಪನ್ನಗಳ ಬೆಂಗಳೂರು ಮಾರುಕಟ್ಟೆಯ ವಿಸ್ತರಣೆಗೆ ಪ್ರಾಮಾಣಿಕವಾಗಿ ಕೆಲಸ ಮಾಡಿದ್ದೇನೆ. ಕಳೆದ ಅವಧಿಯಲ್ಲಿ ಒಕ್ಕೂಟದಲ್ಲಿ ನಡೆದಿರುವ ಹಗರಣಗಳ ತನಿಖೆ ಈವರೆಗೆ ನಡೆದಿಲ್ಲ. ಪ್ರಸ್ತುತ ನಡೆದಿರುವ ಹಾಲು–ನೀರು ಹಗರಣದ ಭ್ರಷ್ಟಾಚಾರವನ್ನು ಸಿಐಡಿ ತನಿಖೆಗೆ ಒಪ್ಪಿಸಿರುವುದರಿಂದ ನಾವು ನ್ಯಾಯ ನಿರೀಕ್ಷೆ ಮಾಡಲು ಸಾಧ್ಯವಾಗುವುದಿಲ್ಲ.

ನನ್ನ ಆಡಳಿತಾವಧಿಯಲ್ಲಿ ಯಾವುದೇ ತಪ್ಪು ನಡೆದಿರುವುದು ಕಂಡುಬಂದರೆ ಕಳೆದ 15 ವರ್ಷಗಳ ಅವಧಿಯ ಆಡಳಿತ ಮಂಡಳಿಯ ವ್ಯವಹಾರಗಳ ಸಮಗ್ರ ತನಿಖೆ ನಡೆಯಲಿ, ನಾನು ತಪ್ಪು ಮಾಡಿದ್ದರೆ ರಾಜಕೀಯ ನಿವೃತ್ತಿ ಪಡೆಯುತ್ತೇನೆ. ಮಾನ್ಯ ಸಹಕಾರ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರು ಮಂಡ್ಯ ಹಾಲು ಒಕ್ಕೂಟದ ಹಾಲು ನೀರು ಹಗರಣ ಸೇರಿದಂತೆ ಒಕ್ಕೂಟದ ಭದ್ರತೆಗೆ ಧಕ್ಕೆತಂದಿರುವ ಎಲ್ಲಾ ಅವ್ಯವಹಾರಗಳನ್ನು ಸಿಬಿಐ ತನಿಖೆಗೆ ಒಪ್ಪಿಸುವಂತೆ ಮುಖ್ಯಮಂತ್ರಿಗಳಿಗೆ ಒತ್ತಡ ಹಾಕಬೇಕು ಎಂದು ಹರೀಶ್ ಆಗ್ರಹಿಸಿದರು. ಪತ್ರಿಕಾಗೋಷ್ಠಿಯಲ್ಲಿ ಮುರುಕನಹಳ್ಳಿ ರವಿ ಮತ್ತು ಕೊಮ್ಮೇನಹಳ್ಳಿ ಜಗದೀಶ್ ಉಪಸ್ಥಿತರಿದ್ದರು.

## ಕವಿ ಸಿದ್ದಲಿಂಗಯ್ಯ ಅವರ ಕಾವ್ಯಗಳೇ ಚಳವಳಿಯಾಗಿದ್ದವು: ಡಾ.ಚಿಕ್ಕಮರಳಿ



ಪಾಂಡವಪುರ ಪಟ್ಟಣದ ಕನ್ನಡ ಸಾಹಿತ್ಯ ಪರಿಷತ್ ಭವನದಲ್ಲಿ ತಾಲೂಕು ಕನ್ನಡ ಸಾಹಿತ್ಯ ಪರಿಷತ್, ಮಕ್ಕಳ ಸಾಹಿತ್ಯ ಪರಿಷತ್, ಕರವೇ ಸೇರಿದಂತೆ ವಿವಿಧ ಸಂಘಟನೆಗಳ ವತಿಯಿಂದ ಕವಿ, ಸಾಹಿತಿ ಸಿದ್ದಲಿಂಗಯ್ಯ ಅವರಿಗೆ ಭಾವಪೂರ್ಣ ಶ್ರದ್ಧಾಂಜಲಿ ಅರ್ಪಿಸಲಾಯಿತು.

ಪಾಂಡವಪುರ : ಕವಿ ಸಿದ್ದಲಿಂಗಯ್ಯ ಅವರ ಕಾವ್ಯಗಳೇ ಚಳವಳಿಯಾಗಿದ್ದವು. ಶೋಷಿತರ ನೋವನ್ನು ತಾವೇ ಅನುಭವಿಸಿದಂತೆ ಅವರ ದನಿಯನ್ನು ತಮ್ಮ ಸಾಹಿತ್ಯದ ಮೂಲಕ ಸಮಾಜಕ್ಕೆ ತಿಳಿಸಿ ಕನ್ನಡ ಸಾಹಿತ್ಯವನ್ನು ಸಂಪನ್ನಗೊಳಿಸಿದ ಇವರ ಬರಹಗಳು ಎಲ್ಲ ವರ್ಗದ ಜನರು ಒಪ್ಪಿಕೊಂಡಿದ್ದರು ಎಂದು ಹಿರಿಯ ಸಾಹಿತಿ, ಪ್ರಗತಿಪರ ಚಿಂತಕ ಡಾ.ಚಿಕ್ಕಮರಳಿ ಬೋರೇಗೌಡ ಹೇಳಿದರು.

ಪಟ್ಟಣದ ಕನ್ನಡ ಸಾಹಿತ್ಯ ಪರಿಷತ್ ಭವನದಲ್ಲಿ ತಾಲೂಕು ಕನ್ನಡ ಸಾಹಿತ್ಯ ಪರಿಷತ್, ಮಕ್ಕಳ ಸಾಹಿತ್ಯ ಪರಿಷತ್, ಕರ್ನಾಟಕ ಜಾನಪದ ಪರಿಷತ್, ಕರವೇ ಸೇರಿದಂತೆ ವಿವಿಧ ಸಂಘಟನೆಗಳು ಆಯೋಜಿಸಿದ್ದ ಕವಿ ಸಿದ್ದಲಿಂಗಯ್ಯ ಅವರ ಶ್ರದ್ಧಾಂಜಲಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಕನ್ನಡ ಸಾಹಿತ್ಯಕ್ಕೆ ದಲಿತ ಬಂಡಾಯ ತಿರುವು ನೀಡಿದ ಸಿದ್ದಲಿಂಗಯ್ಯ ಅವರ ಬರವಣಿಗೆಗಳು ಎಲ್ಲ ಕಾಲಕ್ಕೂ ಪ್ರಸ್ತುತವಾಗಿವೆ. ತಮ್ಮ ಮೊನಚು ಸಾಹಿತ್ಯದ ಮೂಲಕ ಸಿದ್ದಲಿಂಗಯ್ಯ ಅವರು ಹೋರಾಟವನ್ನು ಕಟ್ಟಿದವರು ಎಂದರು.

ಶಿಕ್ಷಕ ಕೆ.ಈಶ್ವರ್ ಪಟ್ಟಸೋಮನಹಳ್ಳಿ ಮಾತನಾಡಿ, ಧರ್ಮದ ಹೆಸರಲ್ಲಿ ನಡೆಯುತ್ತಿದ್ದ ಶೋಷಣೆಯ ವಿರುದ್ಧ ದಲಿತರಲ್ಲಿ ಜಾಗೃತಿ ಮೂಡಿಸಿ ಅವರ ಸ್ವಾಭಿಮಾನವನ್ನು ಕೆರಳಿಸಿದ ಸಿದ್ದಲಿಂಗಯ್ಯ ಅವರ ನಿಧನದಿಂದ ಕನ್ನಡ ಸಾಹಿತ್ಯ ಲೋಕ ಬರಡಾಗಿದೆ. 70ರ ದಶಕದಲ್ಲಿ ದಲಿತರು ಅನುಭವಿಸುತ್ತಿದ್ದ ಶೋಷಣೆಯ ವಿರುದ್ಧ ತಮ್ಮ ಸಾಹಿತ್ಯವನ್ನೆ ಅಸ್ತ್ರವಾಗಿ ಬಳಸಿ ಸಮಾಜದ ಗಮನ ಸೆಳೆದ ಕವಿ ಸಿದ್ದಲಿಂಗಯ್ಯ ಅವರಲ್ಲಿ ಒಬ್ಬ ಹೋರಾಟಗಾರ ಅಡಗಿದ್ದ ಎಂದರು.

ಮಕ್ಕಳ ಸಾಹಿತ್ಯ ಪರಿಷತ್ ಅಧ್ಯಕ್ಷ ಹಾರೋಹಳ್ಳಿ ಧನ್ಯಕುಮಾರ್, ವೀರಶೈವ ಮುಖಂಡ ಬೆಳ್ಳಾಳೆ ಎಸ್.ಎ.ಮಲ್ಲೇಶ್, ಕರ್ನಾಟಕ ಜಾನಪದ ಪರಿಷತ್ ತಾಲೂಕು ಅಧ್ಯಕ್ಷ ಎಂ.ರಮೇಶ್, ಕರವೇ ಅಧ್ಯಕ್ಷ ಗಜೇಂದ್ರ ಗೋವಿಂದರಾಜು, ಮಹಿಳಾ ಘಟಕದ ಜಿಲ್ಲಾಧ್ಯಕ್ಷೆ ಭಾರತಿ ಬೇವಿನಕುಪ್ಪೆ, ವಿಜಯ ಪದವಿ ಪೂರ್ವ ಕಾಲೇಜಿನ ನಿವೃತ್ತ ಉಪಪ್ರಾಂಶುಪಾಲ ನಾರಾಯಣಗೌಡ, ಶಿಕ್ಷಕ ಎಂ.ಎಚ್.ನಂದೀಶ್, ಕಾಂಗ್ರೆಸ್ ಮುಖಂಡ ಕೋ.ಪು.ಗುಣಶೇಖರ್, ಡಿ.ಕೆ.ಅಂಕಯ್ಯ ಇತರರಿದ್ದರು.

## ಹಾಸನದಲ್ಲಿ ಮುಂಗಾರು ಮಳೆ ಅಬ್ಬರ

ಹಾಸನ: ನಗರ ಸೇರಿದಂತೆ ಜಿಲ್ಲೆಯ ವಿವಿಧೆಡೆ ನಿನ್ನೆ ಜೋರು ಮಳೆಯಾಗಿದೆ. ಹಾಸನ, ಸಕಲೇಶಪುರ, ಹೆತ್ತೂರು, ಯಸಳೂರು ಭಾಗದಲ್ಲಿ ಇಡೀ ದಿನ ಆಗಾಗ್ಗೆ ಬಿಡುವು ನೀಡಿ ಮಳೆ ಸುರಿದಿದೆ.

ಹಾಸನ ನಗರ ಹಾಗೂ ಸುತ್ತಮುತ್ತಲೂ ಜೋರು ಮಳೆಯಾಗಿದೆ. ಸಂಜೆ ಬಳಿಕ ಸ್ವಲ್ಪ ಬಿಡುವು ನೀಡಿತು. ಅರಸೀಕೆರೆ, ಚನ್ನರಾಯಪಟ್ಟಣ, ಆಲೂರು, ಬೇಲೂರು, ಕೊಣನೂರಿನಲ್ಲಿ ತುಂತುರು ಮಳೆಯಾಗಿದೆ. ಹಿರೀಸಾವೆ, ಅರಕಲಗೂಡಿನಲ್ಲಿ ಮೋಡ ಮುಸುಕಿದ ವಾತಾವರಣ ಇದ್ದರೆ, ನುಗ್ಗೇಹಳ್ಳಿಯಲ್ಲಿ ಧಾರಾಕಾರ ಮಳೆಯಾಗಿದೆ.

ಕೋವಿಡ್ ಕಾರಣದಿಂದಾಗಿ ಅಗತ್ಯ ವಸ್ತುಗಳ ಖರೀದಿಗೆ ಬೆಳಿಗ್ಗೆ 8 ರಿಂದ ಮಧ್ಯಾಹ್ನ 12ರವರೆಗೆ ಅವಕಾಶ ನೀಡಲಾಗಿತ್ತು. ಮಳೆಯ ಕಾರಣದಿಂದಾಗಿ ಗ್ರಾಹಕರು, ರೈತರು ಹಾಗೂ ಬೀದಿಬದಿ ತರಕಾರಿ ವ್ಯಾಪಾರಿಗಳಿಗೆ ಅಡ್ಡಿ ಉಂಟಾಯಿತು. ಮಳೆಯಲ್ಲಿಯೇ ಹಲವರು ತರಕಾರಿ, ಹೂವು, ಹಣ್ಣು, ಮಾಂಸ, ಮೀನು ಖರೀದಿಸಿದರು.

ಜಲಾನಯನ ಪ್ರದೇಶಗಳಾದ ಸಕಲೇಶಪುರ ಮತ್ತು ಮೂಡಿಗೆರೆ ಭಾಗದಲ್ಲಿ ಮಳೆ ಆಗುತ್ತಿರುವುದರಿಂದ ಹೇಮಾವತಿ ಜಲಾಶಯದ ಒಳ ಹರಿವು ಹೆಚ್ಚಾಗಿದೆ. 2,922 ಅಡಿ ನೀರು ಸಂಗ್ರಹ ಸಾಮರ್ಥ್ಯದ ಜಲಾಶಯದಲ್ಲಿ ಬುಧವಾರ 2881.35 ಅಡಿ ನೀರು ಸಂಗಹ್ರವಾಗಿದ್ದು, ಒಳ ಹರಿವು 5091 ಕ್ಯುಸೆಕ್ ಇದೆ. ಹೊರ ಹರಿವು 250 ಕ್ಯುಸೆಕ್ ಇದೆ.

ಜಲಾಶಯದಲ್ಲಿ 10.216 ಟಿಎಂಸಿ ನೀರಿದೆ.

ಸತತ ನಾಲ್ಕು ದಿನಗಳಿಂದ ಮುಂಗಾರು ಬಿರುಸುಗೊಂಡಿರುವುದರಿಂದ ಅನ್ನದಾತರ ಮೊಗದಲ್ಲಿ ಸಂತಸ ಮೂಡಿದೆ. ಕೃಷಿ ಚಟುವಟಿಕೆಗಳು ಚುರುಕುಗೊಂಡಿವೆ.

ಅರಕಲಗೂಡು ತಾಲ್ಲೂಕಿನ ಮಲ್ಲಿಪಟ್ಟಣ, ದೊಡ್ಡಬೆಮ್ಮತ್ತಿ ಭಾಗದಲ್ಲಿ ಬಿತ್ತಿದ್ದ ಮುಸುಕಿನಜೋಳ ಮೊಳಕೆಯೊಡೆದು ನೆಲೆ ಬಿಟ್ಟು ಮೇಲೇಳುತ್ತಿದೆ. ಕೊಣನೂರು ಮತ್ತು ರಾಮನಾಥಪುರ ಹೋಬಳಿ ಭಾಗದ ಪ್ರಮುಖ ವಾಣಿಜ್ಯ ಬೆಳೆ ತಂಬಾಕಿನ ಕಡೆ ಹಂತದ ನಾಟಿ ಕಾರ್ಯ ಚುರುಕುಗೊಂಡಿದೆ.

ಸಕಲೇಶಪುರ ತಾಲ್ಲೂಕಿನಲ್ಲಿ ಇಡೀ ದಿನ ಬಿಡುವು ನೀಡದ ಮಳೆ ಸುರಿದಿದ್ದು, ಜನಜೀವನ ಅಸ್ತವ್ಯಸ್ತಗೊಂಡಿದೆ. ನಿರಂತರ ಮಳೆ ಹಾಗೂ ಹೆಚ್ಚಿರುವ ಚಳಿಯಿಂದಾಗಿ ಜನರು ಮನೆಯಿಂದ

ಹೊರಬಾರದಂತಾಗಿದೆ. ಕಾಫಿ ತೋಟಗಳ ಕಾರ್ಮಿಕರಿಗೆ ರಜೆ ಘೋಷಿಸಲಾಗಿದೆ. ಗಾಳಿ ಮಳೆಗೆ ಅಲ್ಲಲ್ಲಿ ಮರಗಳು ಉರುಳಿ ಬಿದ್ದಿವೆ.

ಹಾನಬಾಳ್ ಹೋಬಳಿಯ ಪಶ್ಚಿಮಘಟ್ಟದಂಚಿನ ಗ್ರಾಮವಾದ ಅಚ್ಚನಹಳ್ಳಿ, ಹೆತ್ತೂರು ಹೋಬಳಿ ಬೊಮ್ಮನಕೆರೆ ಸುತ್ತಮುತ್ತಲಿನ ಗ್ರಾಮಗಳಲ್ಲಿ ಮೂರು ದಿನಗಳಿಂದ ವಿದ್ಯುತ್ ವ್ಯತ್ಯಯವಾಗಿದೆ.

## ಕೊರೊನಾ ಸಂಕಷ್ಟದಿಂದ ಜನರು ನಲುಗಿ ಹೋಗಿರುವಾಗ ಬಿಜೆಪಿ ನಾಯಕರು ಅಧಿಕಾರಕ್ಕಾಗಿ ಕಿತ್ತಾಟ ನಡೆಸುತ್ತಿದ್ದಾರೆ



ಹಾಸನ: ಕೋವಿಡ್–19 ನ ಎರಡನೇ ಅಲೆಗೆ ಸಿಲುಕಿ ರಾಜ್ಯ ನಲುಗಿ ಹೋಗಿರುವಾಗ ಸರ್ಕಾರದಲ್ಲಿ ಬಿಜೆಪಿ ನಾಯಕರು ಅಧಿಕಾರಕ್ಕಾಗಿ ಕಿತ್ತಾಟ ನಡೆಸುತ್ತಿದ್ದಾರೆ ಎಂದು ಕಾಂಗ್ರೆಸ್ ನಾಯಕ ಹಾಗೂ ಬೆಂಗಳೂರು ಗ್ರಾಮಾಂತರ ಸಂಸದ ಡಿ ಕೆ ಸುರೇಶ್ ಹೇಳಿದ್ದಾರೆ.

ಹಾಸನದಲ್ಲಿ ತೈಲ ಬೆಲೆ ಏರಿಕೆ ವಿರುದ್ಧ ಪ್ರತಿಭಟನೆ ನಡೆಸಿ ಮಾತನಾಡಿದ ಅವರು ರೈತರು ಮತ್ತು ಬಡವರ ಪರ ಬಿಜೆಪಿ ಸರ್ಕಾರಕ್ಕೆ ಕಾಳಜಿಯೇ ಇಲ್ಲ. ಲಾಕ್ ಡೌನ್ ನಿಂದಾಗಿ ಮಧ್ಯಮ, ಕೆಳ ಮಧ್ಯಮ ಮತ್ತು ಬಡವರಿಗೆ ತುಂಬಾ ಕಷ್ಟವಾಗಿದೆ ಎಂದು ಹೇಳಿದರು.

ಪಕ್ಷದ ನಾಯಕತ್ವ ವಿವಾದವನ್ನು ಬಗೆಹರಿಸಲು ಮಾತ್ರ ಬಿಜೆಪಿಯ ರಾಜ್ಯ ಉಸ್ತುವಾರಿ ಅರುಣ್ ಸಿಂಗ್ ರಾಜ್ಯಕ್ಕೆ ಭೇಟಿ ನೀಡಿದ್ದಾರೆಯೇ ಹೊರತು ಅಭಿವೃದ್ಧಿ ವಿಷಯಗಳನ್ನು ಚರ್ಚಿಸಲು ಅಲ್ಲ. ಇದು ರಾಜ್ಯದ ಬಗ್ಗೆ ಬಿಜೆಪಿಗೆ ಇರುವ ಕಾಳಜಿಯನ್ನು ತೋರಿಸುತ್ತದೆ. ಕೊರೋನಾ ಸೋಂಕನ್ನು ತಡೆಗಟ್ಟುವ ಹೆಸರಿನಲ್ಲಿ ಬಿಜೆಪಿ ಸರ್ಕಾರ ಕೋಟ್ಯಂತರ ರೂಪಾಯಿ ವಂಚಿಸಿದೆ ಎಂದು ಕೂಡ ಡಿ ಕೆ ಸುರೇಶ್ ಆರೋಪಿಸಿದರು.

## ಆಹಾರ ಕಿಟ್‌ಗಳ ವಿತರಣೆ

ಮಂಡ್ಯ : ಜಿಮ್ ಮಾಲೀಕರ ಸಂಘದ ವತಿಯಿಂದ ನಗರದ ಬನ್ನೂರು ರಸ್ತೆಯಲ್ಲಿರುವ ಫಿಟ್ನೆಸ್–11 ಸಂಸ್ಥೆ ಆವರಣದಲ್ಲಿ ಜಿಮ್‌ಗಳಲ್ಲಿ ಕೆಲಸ ಮಾಡುವ ತರಬೇತುದಾರರು ಹಾಗೂ ಸಿಬ್ಬಂದಿಗಳಿಗೆ ಆಹಾರ ಕಿಟ್‌ಗಳನ್ನು ವಿತರಿಸಲಾಯಿತು.

ಫಿಟ್ನೆಸ್–11 ಮಾಲೀಕ ಮೋಹನ್‌ಕುಮಾರ್ ಮಾತನಾಡಿ, ಕೋವಿಡ್–19 ಹಿನ್ನೆಲೆಯಲ್ಲಿ ಸರ್ಕಾರ ಜಿಮ್‌ಗಳನ್ನು ಬಂದ್ ಮಾಡಿದೆ. ಇದರಿಂದಾಗಿ ಜಿಮ್‌ಗಳಲ್ಲಿ ಕೆಲಸ ಮಾಡುವ ತರಬೇತುದಾರರು, ಸಿಬ್ಬಂದಿಗಳಿಗೆ ಸಂಬಳ ಕೊಡಲಾಗದೆ ತೊಂದರೆ ಅನುಭವಿಸುವಂತಾಗಿದೆ. ಆದರೂ ಮಾಲೀಕರು ಮತ್ತು ವ್ಯವಸ್ಥಾಪಕರು ಸ್ವಲ್ಪ ಮಟ್ಟಿಗೆ ಸಹಾಯ ಮಾಡುವ ಮನೋಭಾವವನ್ನು ಬೆಳೆಸಿಕೊಂಡು ಸಿಬ್ಬಂದಿಗಳಿಗೆ ಆಹಾರ ಕಿಟ್ ವಿತರಣೆ ಮಾಡಲಾಗುತ್ತಿದೆ ಎಂದು ಹೇಳಿದರು.

ಶೀಘ್ರ ಕೊರೋನಾ ಮಹಾಮಾರಿ ಕಡಿಮೆಯಾಗಿ ಜಿಮ್‌ಗಳು ಮತ್ತೆ ಎಂದಿನಂತೆ ಕಾರ್ಯಾರಂಭ ಮಾಡುವಂತಹ ವಾತಾವರಣ ಕರುಣಿಸಲು ಎಂದು ಪ್ರಾರ್ಥಿಸುವುದಾಗಿ ತಿಳಿಸಿದರು.

ಜಿಮ್‌ಗಳ ಮಾಲೀಕರಾದ ಕೆ.ಬಿ. ರೋಹಿತ್, ಕಿರಣ್, ನಿಶಾಂತ್, ರಾಜು, ಶಶಾಂಕ್, ರಾಘವೇಂದ್ರಷ್ಠಿ, ರವೀಶ್ ಇತರರು ಈ ಸಂದರ್ಭದಲ್ಲಿ ಹಾಜರಿದ್ದರು.

## ಬಿ. ಬೇವೂರೇಗೌಡ ಅವರ ಶ್ರದ್ಧಾಂಜಲಿ ಸಭೆ



ಮಂಡ್ಯ : ಮಂಡ್ಯ ಜಿಲ್ಲಾ ಪದವಿ ಪೂರ್ವ ಕಾಲೇಜುಗಳ ಭೌತಶಾಸ್ತ್ರ ಉಪನ್ಯಾಸಕರ ವೇದಿಕೆ ವತಿಯಿಂದ ಕೋವಿಡ್ ಸೋಂಕಿನಿಂದ ನಿಧನರಾದ ಉಪನ್ಯಾಸಕ ವೈ.ಬಿ. ಬೇವೂರೇಗೌಡ ಅವರ ಶ್ರದ್ಧಾಂಜಲಿ ಸಭೆ ನಗರದ ಡಿಡಿಪಿಯು ಕಚೇರಿ ಆವರಣದಲ್ಲಿ ನಡೆಯಿತು.

ಪದವಿಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಪುಟ್ಟಸ್ವಾಮಿ ಬೇವೂರೇಗೌಡ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿದರು. ನಂತರ ಮಾತನಾಡಿದ ಅವರು, ಬೇವೂರೇಗೌಡ ಅವರು ವಿದ್ಯಾರ್ಥಿಗಳ ನೆಚ್ಚಿನ ಉಪನ್ಯಾಸಕರಾಗಿದ್ದರು ಎಂದು ಹೇಳಿದರು.

ಸದಾ ವಿದ್ಯಾರ್ಥಿಗಳ ಏಳಿಗೆ ಬಗ್ಗೆ ಚಿಂತಿಸುತ್ತಿದ್ದರು. ಸದಾ ಹಸನ್ಮುಖಿಯಾಗಿರುತ್ತಿದ್ದರು. ಇಂತಹ ಉಪನ್ಯಾಸಕರನ್ನು ಕಳೆದುಕೊಂಡು ನಮ್ಮ ವಿಜ್ಞಾನ ವಿಭಾಗ ಬಡವಾಗಿದೆ. ಸದಾ ಜಾಗೃತರಾಗಿದ್ದರೂ ಸಹ ಕೋವಿಡ್‌ಗೆ ಬಲಿಯಾದರು ಎಂದು ವಿಷಾದಿಸಿದರು.

ಬೇವೂರೇಗೌಡ ಅವರನ್ನು ಕಳೆದುಕೊಂಡಿರುವ ಕುಟುಂಬ ದುಃಖವನ್ನು ಸಹಿಸಿಕೊಳ್ಳುವ ಶಕ್ತಿಯನ್ನು ಭಗವಂತ ಕರುಣಿಸಲಿ ಎಂದು ಪ್ರಾರ್ಥಿಸಿದರು.

ರಾಜ್ಯ ಉಪನ್ಯಾಸಕರ ಸಂಘದ ಉಪಾಧ್ಯಕ್ಷ ಹನುಮಂತಯ್ಯ ತಳಗವಾದಿ, ಪ್ರಾಂಶುಪಾಲ ಡಿ.ಕೆ. ಶಿವರಾಂ, ಗುರುಲಿಂಗೇಗೌಡ, ಮಲ್ಲೇಶ್, ತಮ್ಮೇಗೌಡ, ವೀಣಾ, ಶಿವಲಿಂಗೇಗೌಡ, ಕೆ. ಶಿವಲಿಂಗಯ್ಯ, ಎ.ಆರ್. ರಾಮಯ್ಯ, ಚಂದ್ರಲಿಂಗು, ಗೋಪಾಲಕೃಷ್ಣ, ಅಜಿತ್‌ಕುಮಾರ್ ಇತರರು ಈ ಸಂದರ್ಭದಲ್ಲಿ ಹಾಜರಿದ್ದರು.

ಕ್ರಾಂತಿಯಕಿಡಿ

ಪುಟ–04
ಶುಕ್ರವಾರ
18 ಜೂನ್ 2021

# ಕಾಯಕಯೋಗಿ

KAYAKAYOGI-MORNING DAILY ಕನ್ನಡ ದಿನಪತ್ರಿಕೆ



ಪಾಂಡವಪುರ ಪಟ್ಟಣದ ಪೊಲೀಸ್ ಠಾಣೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಹೋಂಗಾರ್ಡ್ ಸಿಬ್ಬಂದಿಗಳಿಗೆ ವಿಷ್ಣುವರ್ಧನ್ ಅಭಿಮಾನಿಗಳ ಸಂಘದ ಜಿಲ್ಲಾಧ್ಯಕ್ಷ ವಿಷ್ಣುವಿಠಲ್ ಆಹಾರದ ಪೊಟ್ಟಣಗಳನ್ನು ವಿತರಿಸಿದರು.



ಶ್ರೀರಂಗಪಟ್ಟಣದಲ್ಲಿ ಮಾಜಿ ಶಾಸಕ ರಮೇಶ್ ಬಂಡಿಸಿದ್ದೇಗೌಡ ಆಸ್ಪತ್ರೆ ಸಿಬ್ಬಂದಿಗಳಿಗೆ ಹಣ್ಣು ಮತ್ತು ದಿನಸಿಕಿಟ್ ವಿತರಿಸಿ ಶುಭ ಕೋರಿದರು.

**ಶ್ರೀ ವಾಣಿ** ಅತ್ಯಮೂಲ್ಯವಾದ ಸಮಯವನ್ನು ಸದುಪಯೋಗಪಡಿಸಿಕೊಳ್ಳಲಿ ಬಿಡಲಿ ಅದು ನಮ್ಮ ಪಾಲಿಗೆ ಎಂದೆಂದಿಗೂ ವ್ಯಯವಾಯಿತೆಂದೇ ತಿಳಿಯಬೇಕು. ಸದ್ವಿನಿಯೋಗವಾದಾಗ ಮಾತ್ರ ಅದಕ್ಕೆ ಸಾರ್ಥಕತೆ: ಹಣ ಖರ್ಚಾದರೆ ಪುನಃ ಗಳಿಸಬಹುದು. ಆದರೆ ಕಾಲ ಜಾರಿದರೆ ಅದು ಮತ್ತೆ ದೊರೆಯುವುದಿಲ್ಲ. – ಸಿದ್ಧಗಂಗಾಶ್ರೀ

## ಕಾಯಕಯೋಗಿ ಮಾಸ್ಕ್ ಅಭಿಯಾನ




ಇಡೀ ವಿಶ್ವವನ್ನೇ ಬೆಚ್ಚಿಬೀಳಿಸಿರುವ ಮಹಾಮಾರಿ ಕೊರೋನಾ ತಡೆಗಟ್ಟುವುದು ಇಂದಿನ ಜರೂರು ಪರಿಸ್ಥಿತಿ.
ಪ್ರತಿಯೊಬ್ಬರು ಕಡ್ಡಾಯವಾಗಿ ಮಾಸ್ಕ್ ಧರಿಸಿ ಸೆಲ್ಫಿ ಕಳಿಸಿ ಮಾಸ್ಕ್ ತೊಟ್ಟ ನಿಮ್ಮ ಭಾವಚಿತ್ರವನ್ನು ಕಾಯಕಯೋಗಿ ಪ್ರಕಟಿಸಲಿದೆ.
ಬಿ.ಕೆ.ಅರುಣಜ್ಯೋತಿ, ಸಂಪಾದಕಿ ಕಾಯಕಯೋಗಿ ದಿನಪತ್ರಿಕೆ, ಮಂಡ್ಯ, ಮೊ:9980605484

*ಸರ್ಕಾರದ ನಿಯಮಾವಳಿ ಪಾಲಿಸೋಣ*
*ಮಹಾಮಾರಿ ಕರೋನಾ ಓಡಿಸೋಣ*

## ಕಾಯಕಯೋಗಿ ಕಾಳಜಿ




ಪರಿಸರ ಸಂರಕ್ಷಣೆ ಸರ್ವರ ಹೊಣೆ

# ಸಂಕಷ್ಟದ ಜನತೆಗೆ ಕಿಟ್ ವಿತರಣೆ

ಮಂಡ್ಯ : ಕೋವಿಡ್ ಮಹಾಮಾರಿ ಹಲವರ ಬದುಕಿನಲ್ಲಿ ಬಿರುಗಾಳಿಯನ್ನೇ ಎಬ್ಬಿಸಿದೆ.ಈ ನಿಟ್ಟಿನಲ್ಲಿ ತಮ್ಮ ಪ್ರಾಣದ ಹಂಗನ್ನು ತೊರೆದು ಕೋವಿಡ್ ಎರಡನೇ ಅಲೆಯಲ್ಲಿ ಕೆಲಸ ನಿರ್ವಹಿಸುತ್ತಿರುವ ಆಶಾ,ಅಂಗನವಾಡಿ, ವೈದ್ಯರು, ಪೌರಕಾರ್ಮಿಕರು, ಅಂಗವಿಕಲರಿಗೆ ಶಾಸಕ ಎಂ.ಶ್ರೀನಿವಾಸ್ ಮಂಡ್ಯ ತಾಲ್ಲೂಕಿನ ಹುಲಿವಾನ ಹಾಗೂ ಕೆರಗೋಡು ಗ್ರಾಮ ಪಂಚಾಯಿತಿಯ ಆವರಣದಲ್ಲಿ ಆಹಾರ ಕಿಟ್ ಹಾಗೂ,ಮೆಡಿಕಲ್ ಕಿಟ್‌ಗಳನ್ನು ವಿತರಿಸಿ ಮಾತನಾಡಿದರು.



ಮಂಡ್ಯ ವಿಧಾನಸಭಾ ಕ್ಷೇತ್ರದಲ್ಲಿ 10000 ಆಹಾರ ಕಿಟ್‌ಗಳನ್ನು ವಿತರಿಸುತ್ತಿದ್ದು, ಈಗಾಗಲೇ ಕಸಬಾ ಹಾಗೂ ಕೆರಗೋಡು ಹೋಬಳಿಗಳಲ್ಲಿ ಕಿಟ್ ವಿತರಿಸಲಾಗಿದೆ ಎಂದರು.

ನಾಳೆಯಿಂದ ಬಸರಾಳು ಹೋಬಳಿ ಹಾಗೂ ಮಂಡ್ಯ ಸಿಟಿಯಲ್ಲಿ ಕರೋನಾ ವಾರಿಯರ್ಸ್ ಹಾಗು ಅಂಗವಿಕಲರಿಗೆ ಆಹಾರ ಕಿಟ್ ವಿತರಿಸಲಾಗುವುದು ಎಂದರು.

ಕೋವಿಡ್‌ನಿಂದ ಕಂಗೆಟ್ಟ ಜನರಿಗೆ, ಆರ್ಥಿಕ ಸಂಕಷ್ಟಕ್ಕೆ ಸಿಲುಕಿದವರಿಗೆ ನೆರವಾಗುವ ಉದ್ದೇಶದಿಂದ ಈ ಕಾರ್ಯಕ್ರಮ ರೂಪಿಸಲಾಗಿದೆ. ಕಟ್ಟಡ ಕಾರ್ಮಿಕರು, ನೇಕಾರರು ಮತ್ತಿತರ ಶ್ರಮಿಕ ವರ್ಗದವರಿಗೆ ಸರ್ಕಾರ ಪ್ಯಾಕೇಜ್ ಮೂಲಕ ಸಹಾಯಧನ ನೀಡುತ್ತಿದೆ ಆನ್ಲೈನ್ ಮೂಲಕ ಅರ್ಜಿ ಹಾಕಿ ಫಲಾನುಭವಿಗಳು ಇದನ್ನು ಪಡೆದುಕೊಳ್ಳಿ ಎಂದು ಹೇಳಿದರು.

ಹುಲಿವಾನ ಗ್ರಾಮದಲ್ಲಿ 17 ಮಂದಿ ಬುದ್ಧಿಮಾಂದ್ಯ ಮಕ್ಕಳಿದ್ದು ಪೋಷಕರು ಅವರ ಭವಿಷ್ಯ ಹಾಳು ಮಾಡದೆ ಅವರುಗಳನ್ನು ಶಾಲೆಗೆ ಸೇರಿಸಿ ಎಂದು ಸಲಹೆ ನೀಡಿದರು.

**ಕೆರಗೋಡಿನಲ್ಲಿ 210 ಮಂದಿಗೆ ವಿತರಣೆ :** ಕೆರಗೋಡು ಗ್ರಾಮ ಪಂಚಾಯಿತಿ ಆವರಣದಲ್ಲಿ ತಮ್ಮ ಜೀವದ ಹಂಗನ್ನು ತೊರೆದು ಕೆಲಸ ಮಾಡುತ್ತಿರುವ ಕೊರೋನಾ ವಾರಿಯರ್ಸ್‌ಗಳ ಸೇವೆ ಅನನ್ಯವಾದದ್ದು,ಜನರು ಬದುಕಲು ಕೊರೋನ ವಾರಿಯರ್ಸ್ ಪ್ರಮುಖರು ಎಂದು ತಿಳಿಸಿದರು.

ಮನ್ ಮುಲ್ ಉಪಾಧ್ಯಕ್ಷ ಎಂ.ಎಸ್.ರಘುನಂದನ್ ಮಾತನಾಡಿ, ಕೋವಿಡ್ ಒಂದು ಮತ್ತು ಎರಡನೇ ಅಲೆಯಲ್ಲಿ ಶಾಸಕ ಎಂ.ಶ್ರೀನಿವಾಸ್ ಅವರು ತಮ್ಮ ಆರೋಗ್ಯವನ್ನು ಲೆಕ್ಕಿಸದೆ ಆಹಾರ ಕಿಟ್, ಗ್ರಾಮ ಪಂಚಾಯಿತಿಗಳಲ್ಲಿ ಸ್ಯಾನಿಟೈಸರ್ ಸಿಂಪಡಣೆ ಮಾಡಿಸುವ ಮೂಲಕ ಪ್ರತಿನಿತ್ಯ ಜನರ ಮಧ್ಯೆ ಇದ್ದು ಹೆಚ್ಚು ಮುತುವರ್ಜಿ ವಹಿಸಿ ಕೋವಿಡ್ ನಿಯಂತ್ರಣವಾಗಲು ಕೆಲಸ ಮಾಡುತ್ತಿದ್ದಾರೆ ಎಂದರು.

ಅದರಲ್ಲೂ ಕೆರಗೋಡು ಗ್ರಾಮ ಪಂಚಾಯಿತಿಗೆ ವಿಶೇಷ ಆಸಕ್ತಿ ವಹಿಸಿ ಕೆರಗೂಡು ಗ್ರಾಮ ಪಂಚಾಯಿತಿಯನ್ನು ಪಟ್ಟಣ ಪಂಚಾಯಿತಿ ಮಾಡಿಸಲು ಕಾರ್ಯೋನ್ಮುಖರಾಗಿ ಕೆಲಸ ಮಾಡುತ್ತಿದ್ದಾರೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಹುಲಿವಾನ ಗ್ರಾಮ ಪಂಚಾಯಿತಿ ಅಧ್ಯಕ್ಷೆ ಸೌಮ್ಯಲತ, ಉಪಾಧ್ಯಕ್ಷ ಶ್ರೀಧರ್, ಸದಸ್ಯರಾದ ರವಿಕುಮಾರ್, ಶ್ರೀನಿವಾಸ್ ವ್ಯವಸಾಯ ಸೇವಾ ಸಹಕಾರ ಸಂಘದ ಚೆಲುವರಾಜು, ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ವೆಂಕಟಯ್ಯ, ಮುಖಂಡ ಮಂಜು ಹಾಗೂ ಕೆರಗೋಡು ಗ್ರಾಮಪಂಚಾಯಿತಿ ಅಧ್ಯಕ್ಷ ಲಕ್ಷ್ಮಿ, ಪಿಡಿಓ ಮಂಜುನಾಥ್, ಸೇರಿದಂತೆ ಸದಸ್ಯರುಗಳು ಹಾಜರಿದ್ದರು.

❑ 1ನೇ ಪುಟದಿಂದ

## ಹೆಣದ ಮೇಲೆ ಸರ್ಕಾರದ ಆಡಳಿತ

ನಂತರ ಪ್ರಚಾರಕ್ಕೆ ಇಳಿಯತ್ತೇನೆ, ಒಂದು ವರ್ಷದ ಕಾಲಾವಕಾಶ ಸಿಗುತ್ತದೆ. ಪಕ್ಷವನ್ನು ರಾಜ್ಯದಾದ್ಯಂತ ಸಂಘಟನೆ ಮಾಡಿ ಮತ್ತೆ ಅಧಿಕಾರಕ್ಕೆ ತರುತ್ತೇನೆ ಎಂದು ಹೇಳಿದರು.

ಜೆಡಿಎಸ್ ಸರ್ವೋಚ್ಛ ನಾಯಕರಾದ ಮಾಜಿಪ್ರಧಾನಿ ಹೆಚ್.ಡಿ.ದೇವೇಗೌಡರು ಮಾತ್ರ ಹೃದಯಿಗಳು ಅವರು ಇಡೀ ರಾಜ್ಯದ ಜನತೆಯನ್ನು ತಮ್ಮ ಸ್ವಂತ ಮಕ್ಕಳಂತೆ ಕಂಡು ಪ್ರೀತಿಸುತ್ತಾರೆ. ರಾಜ್ಯದ ನೀರಾವರಿ ಯೋಜನೆಗಳಿಗೆ ಗೌಡರ ಕೊಡುಗೆ ಅಪಾರವಾಗಿದೆ. ಅಬ್ಕಾರಿ ಮದ್ಯ ಮಾರಾಟದ ಹಣದಿಂದ ರಾಜ್ಯ ಸರ್ಕಾರ ನಡೆ ಯುತ್ತಿದೆ. ರಾಜ್ಯ ಸರ್ಕಾರವು ಕೋವಿಡ್‌ನಿಂದ ಮೃತಪಟ್ಟ ಕು ಟುಂಬಗಳಿಗೆ 1ಲಕ್ಷರೂ ನೀಡುತ್ತಿರುವುದು ಏನೊಂದಕ್ಕೂ ಸಾಲ ದಂತಾಗಿದೆ. ಕುಟುಂಬದ ಮುಖ್ಯಸ್ಥರನ್ನು ಕಳೆದುಕೊಂಡು ಕುಟುಂಬಕ್ಕೆ ರಾಜ್ಯ ಸರ್ಕಾರವು ಕುಟುಂಬಕ್ಕೆ ಯಜಮಾನರನ್ನು ತಂದು ಕೊಡಲು ಸಾಧ್ಯವೇ ಕೋವಿಡ್ ಮಹಾಮಾರಿಯ ರುದ್ರ ನರ್ತನವು ನೂರಾರು ಕುಟುಂಬಗಳನ್ನು ಬೀದಿಗೆ ತಂದು ನಿಲ್ಲಿಸಿದೆ. ಹಲವಾರು ಕುಟುಂಬಗಳು ಅನಾಥವಾಗಿರುವುದನ್ನು ಕಂಡರೆ ಹೃದಯವು ತುಂಬಿ ಬರುತ್ತದೆ ಎಂದು ಹೆಚ್‌ಡಿಕೆ ಭಾವುಕರಾದರು.

ಕಿಟ್ ವಿತರಣಾ ಕಾರ್ಯಕ್ರಮದಲ್ಲಿ ರಾಜ್ಯ ಜೆಡಿಎಸ್ ಯುವ ಘಟಕದ ಅಧ್ಯಕ್ಷ ನಿಖಿಲ್‌ಕುಮಾರಸ್ವಾಮಿ, ವಿಧಾನಪರಿಷತ್ ಸದಸ್ಯ ಅಪ್ಪಾಜಿಗೌಡ, ಮಂಡ್ಯ ಜಿಲ್ಲಾ ಜೆಡಿಎಸ್ ಅಧ್ಯಕ್ಷ ಡಿ.ರಮೇಶ್, ಮಂಡ್ಯ ಹಾಲು ಒಕ್ಕೂಟದ ಅಧ್ಯಕ್ಷ ರಾಮಚಂದ್ರ, ಡಿಸಿಸಿ ಬ್ಯಾಂಕಿನ ಉಪಾಧ್ಯಕ್ಷ ಹೆಚ್.ಕೆ.ಅಶೋಕ್, ತಾಲೂಕು ಜೆಡಿಎಸ್ ಅಧ್ಯಕ್ಷ ಜಾನಕೀರಾಂ, ಜಿಲ್ಲಾ ಪಂಚಾಯಿತಿ ಉಪಾಧ್ಯಕ್ಷೆ ಗಾಯತ್ರಿರೇವಣ್ಣ, ಮನ್‌ಮುಲ್ ನಿರ್ದೇಶಕರಾದ ಹೆಚ್.ಟಿ.ಮಂಜು, ಕಂಚನಹಳ್ಳಿ ಬಾಲಕೃಷ್ಣ, ಜೆಡಿಎಸ್ ರಾಜ್ಯ ಮುಖಂಡರಾದ ಕುರುಬಹಳ್ಳಿ ನಾಗೇಶ್, ಎಂ.ಪಿ.ಲೋಕೇಶ್, ಬೇಲದಕೆರೆ ಚನ್ನೇಗೌಡ, ಪುರಸಭೆ ಉಪಾಧ್ಯಕ್ಷೆ ಗಾಯತ್ರಿ ಸುಬ್ಬಣ್ಣ ಮತ್ತಿತರರು ಉಪಸ್ಥಿತರಿದ್ದರು.

**ಬಿ.ಎಲ್.ದೇವರಾಜು ಗುಂಪಿನ ಗೈರುಹಾಜರಿ:**

ಫುಡ್‌ಕಿಟ್ ವಿತರಣಾ ಕಾರ್ಯಕ್ರಮಕ್ಕೆ ಮಾಜಿ ಸಿಎಂ ಹೆಚ್.ಡಿ.ಕುಮಾರಸ್ವಾಮಿ ಅವರು ಆಗಮಿಸಿದ್ದರೂ ಕೆ.ಆರ್.ಪೇಟೆಯಲ್ಲಿಯೇ ಇದ್ದ ಕಳೆದ ಉಪಚುನಾವಣೆಯ ಜೆಡಿಎಸ್ ಪರಾಜಿತ ಅಭ್ಯರ್ಥಿ ಟಿಎಪಿಸಿಎಂಎಸ್ ಅಧ್ಯಕ್ಷ ಬಿ.ಎಲ್.ದೇವರಾಜು, ರಾಜ್ಯ ಜೆಡಿಎಸ್ ಮುಖಂಡ ಬಸ್‌ಕೃಷ್ಣೇಗೌಡ, ಯುವ ಜೆಡಿಎಸ್ ಘಟಕದ ಅಧ್ಯಕ್ಷ ಕೆ.ಎಸ್.ಸಂತೋಷ್ ಗೈರು ಹಾಜರಾಗಿದ್ದುದು ಎದ್ದು ಕಾಣುತ್ತಿತ್ತು. ಫುಡ್‌ಕಿಟ್ ವಿತರಣಾ ಸಮಾರಂಭದ ನೇತೃತ್ವ ವಹಿಸಿ ಮುಂಚೂಣಿಯಲ್ಲಿದ್ದ ಮನ್‌ಮುಲ್ ನಿರ್ದೇಶಕ ಹೆಚ್.ಟಿ.ಮಂಜು ಅವರು ಮುಂದಿನ ವಿಧಾನಸಭಾ ಚುನಾವಣೆಯ ತಯಾರಿಗೆ ವೇದಿಕೆಯನ್ನು ಈಗಿನಿಂದಲೇ ನಿರ್ಮಾಣ ಮಾಡಿಕೊಳ್ಳುತ್ತಿದ್ದಾರೆ. ಮುಂದಿನ ದಿನಗಳಲ್ಲಿ ಅವರೇ ತಾಲೂಕಿನ ಜೆಡಿಎಸ್ ನಾಯಕತ್ವ ವಹಿಸಿ ಪಕ್ಷ ಸಂಘಟನೆ ಮಾಡ್ತಾರೆ ಎಂಬ ಮಾತುಗಳು ಸಭೆಯಲ್ಲಿ ಕೇಳಿ ಬಂದವು.

## ಕೋವಿಡ್ 3ನೇ ಅಲೆ ಸಾಧ್ಯತೆ

ಕೈಗೊಂಡಿರುವ ಮುನ್ನೆಚ್ಚರಿಕೆ ಕ್ರಮಗಳ ಕುರಿತಂತೆ ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಉಪಮುಖ್ಯಮಂತ್ರಿ ಸಿ.ಎನ್.ಅಶ್ವಥ್ ನಾರಾಯಣ್ ಮಾತನಾಡಿ, ಜಿಲ್ಲೆಗೆ ಕೋವಿಡ್ ನಿಯಂತ್ರಣ ಸಂಬಂಧ ಬೇಕಾಗುವ ಸಕಾಲ ವ್ಯವಸ್ಥೆ ಗಳನ್ನು ಸರ್ಕಾರದ ವತಿಯಿಂದ ಒದಗಿಸಲಾಗುವುದು ಎಂದರು.

ಕೋವಿಡ್ ಸೋಂಕಿತರಿಗೆ ಆಕ್ಸಿಜನ್ ಬೆಡ್, ವೆಂಟಿಲೇಟರ್ಸ್, ಎಲ್ಲಾ ವ್ಯವಸ್ಥೆ ಗಳನ್ನು ಮಾಡಿಕೊಡಲಾಗುವುದು ಎಂದರು.

ಮೂರನೇ ಅಲೆ ಆರಂಭವಾಗುವ ಮುನ್ನ ಎಲ್ಲ ಮಕ್ಕಳ ತಪಾಸಣೆಗೆ ಕ್ರಮಕೈಗೊಳ್ಳಲು ನಿರ್ಧರಿಸಲಾಗಿದೆ ಎಂದರು.

ಈ ಸಂದರ್ಭದಲ್ಲಿ ಅಪೌಷ್ಠಿಕತೆಯಿಂದ ಬಳಲುತ್ತಿರುವ ಮಕ್ಕಳಿಗೆ ಪೋಷಕಾಂಶ ಆಹಾರ ಕಿಟ್‌ಗಳನ್ನು ವಿತರಿಸಲಾಯಿತು ಹಾಗೂ ಮಂಗಳ ಮುಖಿಯರಿಗೆ ಆಹಾರ ಕಿಟ್ ನ್ನು ವಿತರಿಸಲಾಯಿತು.

ಸಭೆಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಕೆ.ಸಿ ನಾರಾಯಣಗೌಡ, ಶಾಸಕರಾದ ಶ್ರೀನಿವಾಸ್, ವಿಧಾನ ಪರಿಷತ್ ಸದಸ್ಯರಾದ ಕೆ.ಟಿ ಶ್ರೀಕಂಠೇಗೌಡ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ನಿರ್ದೇಶಕಿ ಅನುರಾಧ, ಜಿಲ್ಲಾಧಿಕಾರಿ ಎಸ್ .ಅಶ್ವಥಿ, ಜಿ.ಪಂ ಸಿಇಓ ದಿವ್ಯಾಪ್ರಭು, ವಿಕಲಚೇತನರ ಇಲಾಖೆಯ ನಿರ್ದೇಶಕರಾದ ಮುನಿರಾಜು, ಉಪನಿರ್ದೇಶಕ ರಾಜುಮೂರ್ತಿ, ಅಪರ ಜಿಲ್ಲಾಧಿಕಾರಿ ಶೈಲಜಾ, ಜಿಲ್ಲಾ ಆರೋಗ್ಯಾಧಿಕಾರಿ ಡಾ.ಧನಂಜಯ, ಉಪವಿಭಾಗಾಧಿಕಾರಿಗಳಾದ ಶಿವಾನಂದಮೂರ್ತಿ, ಐಶ್ವರ್ಯ ಹಾಗೂ ಮತ್ತಿತರರು ಉಪಸ್ಥಿತರಿದ್ದರು.

## ಸಸಿ ನೆಡೋಣ–ಕರೋನಾ ಓಡಿಸೋಣ



*ಇಡೀ ವಿಶ್ವವನ್ನೇ ತಲ್ಲಣಗೊಳಿಸಿರುವ ಮಹಾಮಾರಿ ಕರೋನಾ ಸೋಂಕಿನಿಂದ ಪ್ರತಿನಿತ್ಯ ಸಾವಿರಾರು ಸಾವು–ನೋವುಗಳು ಸಂಭವಿಸುತ್ತಿವೆ. ಸ್ವಾರ್ಥಕ್ಕಾಗಿ ಪರಿಸರ ನಾಶ ಮಾಡಿದ ಪರಿಣಾಮ ಆಕ್ಸಿಜನ್ ಕೊರತೆ ಮನುಷ್ಯನನ್ನು ಉಸಿರುಗಟ್ಟಿ ಸಾಯುವಂತೆ ಮಾಡಿದೆ. ಇಂತಹ ಸಂಕಷ್ಟದಿಂದ ಪಾರಗಲು ನಾಳಿನ ಭವಿಷ್ಯಕ್ಕೆ ಇಂದೇ ಸಸಿಯೊಂದನ್ನು ನೆಟ್ಟು ಮತ್ತೆ ಪ್ರಕೃತಿಯ ಮಡಿಲನ್ನು ಮತ್ತಷ್ಟು ಗಟ್ಟಿಗೊಳಿಸೋಣ. ಪ್ರತಿಯೊಬ್ಬರೂ ತಮ್ಮ ಮನೆಯಂಗಳ, ಗದ್ದೆ, ಹೊಲ, ಸರ್ಕಾರಿ ಜಾಗ, ಶಾಲಾ ಆವರಣ, ಗೋಮಾಳದಲ್ಲಿ ಸಸಿಗಳನ್ನು ನೆಟ್ಟು ಸಸ್ಯಸಂಕುಲದ ಸಮೃದ್ದಿಗೆ ಮುಂದಾಗೋಣ.*

***ನೀವು ಸಸಿನೆಟ್ಟ ಪೋಟೋ ನಮಗೆ ವಾಟ್ಸ್‌ಪ್ ಮಾಡಿ.***
***ಮೊ : 9343230788.***

## ಕ್ರಿಶ್ಚಿಯನ್ ಅಭಿವೃದ್ಧಿ ಯೋಜನೆ : ಅರ್ಜಿ ಆಹ್ವಾನ

ಮಂಡ್ಯ : 2021–22 ನೇ ಸಾಲಿನಲ್ಲಿ ಕ್ರಿಶ್ಚಿಯನ್ ಅಭಿವೃದ್ಧಿ ಯೋಜನೆಯಡಿ ಚರ್ಚ್ ನವೀಕರಣ, ಆವರಣಗೋಡೆ, ಸಮುದಾಯ ಭವನ, ಅನಾಥಶ್ರಮ ಮತ್ತು ವೃದ್ಧಾಶ್ರಮಗಳ ಯೋಜನೆಗಳಿಗೆ ಸಹಾಯಧನ ನೀಡಲು ಅರ್ಜಿ ಆಹ್ವಾನಿಸಲಾಗಿದೆ.

ಈ ಸಂಬಂಧ ಈ ಸಮುದಾಯದ ಸಂಸ್ಥೆಯವರು, ಜಿಲ್ಲೆಯಲ್ಲಿರುವ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಕಛೇರಿಯಲ್ಲಿ ಅರ್ಜಿಗಳನ್ನು ಪಡೆದು ಪ್ರಸ್ತಾವನೆ ಸಲ್ಲಿಸಬಹುದು.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಲ್ಪಸಂಖ್ಯಾತರ ಅಧಿಕಾರಿಗಳ ಕಛೇರಿ, ಬಿಸಿಲು ಮಾರಮ್ಮ ದೇವಸ್ಥಾನದ ಪಕ್ಕ ಕೆರೆ ಬೀದಿ,ನಾಗಮಂಗಲ ರಸ್ತೆ ದೂ.ಸಂ:08232–297240 ಅನ್ನು ಸಂಪರ್ಕಿಸಬಹುದೆಂದು ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ತೆಂಗಿನ ಸಸಿ ವಿತರಣೆಗೆ ಚಾಲನೆ

ಶ್ರೀರಂಗಪಟ್ಟಣ : ತೋಟಗಾರಿಕೆ ಇಲಾಖೆ ವತಿಯಿಂದ ರೈತರಿಗೆ ಸಬ್ಸಿಡಿ ದರದಲ್ಲಿ ತೆಂಗಿನ ಸಸಿ ವಿತರಿಸುವ ಕಾರ್ಯಕ್ಕೆ ಪುರಸಭೆ ಅಧ್ಯಕ್ಷೆ ನಿರ್ಮಲಾ ಚಾಲನೆ ನೀಡಿದರು.

ಪಟ್ಟಣದ ತೋಟಗಾರಿಕೆ ಇಲಾಖೆ ಆವರಣದಲ್ಲಿ ನಡೆದ ಸಸಿ ವಿತರಣಾ ಕಾರ್ಯಕ್ರಮದಲ್ಲಿ ಬುಧವಾರ ಸಾಂಕೇತಿಕವಾಗಿ ಸುಮಾರು 30 ಮಂದಿ ರೈತರಿಗೆ ತೆಂಗಿನ ಸಸಿಗಳನ್ನು ವಿತರಿಸಲಾಯಿತು.

ಬಳಿಕ ತೋಟಗಾರಿಕೆ ಇಲಾಖೆಯ ಸಹಾಯಕ ನಿರ್ದೇಶಕ ಚಂದ್ರು ಮಾತನಾಡಿ, ಸರ್ಕಾರ ಹಸಿರು ಕ್ರಾಂತಿ ಸೃಷ್ಟಿಸುವ ಸಲುವಾಗಿ ಸಬ್ಸಿಡಿ ದರದಲ್ಲಿ ತೆಂಗು ಹಾಗೂ ಇತರೆ ಹಣ್ಣಿನ ಗಿಡಗಳನ್ನು ವಿತರಿಸಲಾಗುತ್ತಿದೆ. ಶ್ರೀರಂಗಪಟ್ಟಣ ತಾಲೂಕು ಹೆಚ್ಚು ನೀರಾವರಿ ಪ್ರದೇಶ ಆಗಿರುವುದರಿಂದ ಹೆಚ್ಚು ತೆಂಗಿನ ಪ್ರದೇಶವನ್ನಾಗಿಸುವ ಗುರಿಹೊಂದಲಾಗಿದೆ ಎಂದರು.

ತಾ.ಪಂ ಇಓ ಭೈರಪ್ಪ ಮಾತನಾಡಿ, ತೋಟಗಾರಿಕೆ ಇಲಾಖೆಯಿಂದ ಸಬ್ಸಿಡಿ ಧರದಲ್ಲಿ ತೆಂಗಿನ ಸಸಿ ನೀಡುವ ಜೊತೆಗೆ ನರೇಗಾದಿಂದಲೂ ಸಹ ತೆಂಗು ನೆಡಲು ತೆಗೆಯುವ ಗುಂಡಿ, ಗೊಬ್ಬರ ಸೇರಿದಂತೆ ಸಸಿಗಳ ಪೋಷಣೆಗಾಗಿ ಎಕರೆಗೆ 25ಸಾವಿರ ರು. ವಿರತಣೆ ಮಾಡಲಾಗುವುದು ರೈತರು ಸೂಕ್ತ ದಾಖಲೆಗಳನ್ನು ಒದಗಿಸಿ ಇದರ ಪ್ರಯೋಜನ ಪಡೆದುಕೊಳ್ಳಬೇಕು ಎಂದರು.

## ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಪ್ರತಿಭಟನೆ



ಪಾಂಡವಪುರ : ಕೋವಿಡ್ ಲಸಿಕೆ ನೀಡುವಿಕೆಯಲ್ಲಿ ತಾಲೂಕು ಆಡಳಿತ ರಾಜಕೀಯ ಬೆರೆಸದೆ ಎಲ್ಲಾ ಗ್ರಾಮ ಮಟ್ಟದಲ್ಲೂ ಲಸಿಕೆ ನೀಡುವುದು ಸೇರಿದಂತೆ ವಿವಿಧ ಹಕ್ಕೋತ್ತಾಯಗಳ ಈಡೇರಿಕೆಗೆ ಒತ್ತಾಯಿಸಿ ರೈತಸಂಘದ ಕಾರ್ಯಕರ್ತರು ತಾಲೂಕು ಕಚೇರಿ ಮುಂದೆ ಪ್ರತಿಭಟನೆ ನಡೆಸಿದರು.

ಪಟ್ಟಣದ ತಾಲೂಕು ಕಚೇರಿ ಬಳಿ ಜಮಾವಣೆಗೊಂಡ ರೈತ ಸಂಘ ಕಾರ್ಯಕರ್ತರು ರಾಜ್ಯ ಸರ್ಕಾರದ ವಿರುದ್ಧ ಘೋಷಣೆ ಕೂಗಿ ತೀವ್ರ ಆಕ್ರೋಶ ವ್ಯಕ್ತಪಡಿಸಿದರು.

ಕೋವಿಡ್ ಎರಡನೇ ಅಲೆ ತೀವ್ರಗೊಂಡು ಕೊರೊನಾ ಸೋಂಕಿತರ ಸಂಖ್ಯೆ ಪ್ರತಿನಿತ್ಯವೂ ಹೆಚ್ಚಳವಾಗುತ್ತಿರುವ ಹಿನ್ನೆಲೆಯಲ್ಲಿ ತಾಲೂಕು ಆಡಳಿತ ಸಾವಿರಾರು ಜನರನ್ನು ಒಂದೇ ಕಡೆ ಸೇರಿಸಿ ಲಸಿಕೆ ಹಾಕುತ್ತಿರುವುದು ಸರಿಯಲ್ಲ. ಇದು ಕೋವಿಡ್ ನಿಯಮಾವಳಿಗಳಿಗೆ ವಿರುದ್ಧವಾಗಿದೆ. ಹೀಗಾಗಿ ಪ್ರತಿ ಗ್ರಾಮ ಪಂಚಾಯಿತಿ ಮಟ್ಟದಲ್ಲೂ ಲಸಿಕೆ ಹಾಕುವ ಮೂಲಕ ಪರಸ್ಪರ ಸಾಮಾಜಿಕ ಅಂತರ ಕಾಯ್ದುಕೊಳ್ಳಬೇಕು. ಜತೆಗೆ ಕೋವಿಡ್ ಟೆಸ್ಟ್‌ಗಳನ್ನು ಹೆಚ್ಚಿಸಬೇಕು ಎಂದು ಒತ್ತಾಯಿಸಿದರು.

ವಿಶ್ವೇಶ್ವರಯ್ಯ ನಾಲೆ ಆಧುನೀಕರಣ ಸ್ಥಗಿತಗೊಳಿಸಿ ರೈತರ ಬೆಳೆಗೆ ಸಮರ್ಪಕವಾಗಿ ನೀರೋದಗಿಸಬೇಕು. ವಿಶ್ವೇಶ್ವರಯ್ಯ ನಾಲೆಯ ಎಲ್ಲಾ ವಿತರಣಾ ನಾಲೆಗಳನ್ನು ಆಧುನೀಕರಣಗೊಳಿಸಬೇಕು ಎಂದು ಒತ್ತಾಯಿಸಿದರು.

ಕೋವಿಡ್‌ನಿಂದ ಮೃತರಾದವರಿಗೆ 5 ಲಕ್ಷ ರೂ. ಪರಿಹಾರ ಘೋಷಣೆ ಮಾಡಿ ಎಲ್ಲಾ ಸಾಲಗಳನ್ನು ಮನ್ನಾ ಮಾಡಬೇಕು. ಜತೆಗೆ ಈ ಕೂಡಲೇ ಪಿಎಸ್‌ಎಸ್‌ಕೆ ಸೇರಿದಂತೆ ಜಿಲ್ಲೆಯ ಎಲ್ಲಾ ಸಕ್ಕರೆ ಕಾರ್ಖಾನೆಗಳನ್ನು ಪ್ರಾರಂಭಿಸಿ ಕಬ್ಬಿನ ಬೆಲೆಯನ್ನು ಕನಿಷ್ಠ 4,500 ರೂ. ನಿಗದಿಗೊಳಿಸಬೇಕು ಎಂದು ಆಗ್ರಹಿಸಿದರು.

ರೈತರು ಬೆಳೆದ ಭತ್ತ ದಲ್ಲಾಳಿಗಳ ಪಾಲಾಗುತ್ತಿರುವ ಹಿನ್ನೆಲೆ ಭತ್ತ ಖರೀದಿ ಕೇಂದ್ರಗಳನ್ನು ಆರಂಭಿಸಿ ವರ್ಷವಿಡಿ ನಿರಂತರವಾಗಿ ಖರೀದಿ ಕೇಂದ್ರ ತೆರೆದಿರಬೇಕು. ಜತೆಗೆ ರೈತರ ಖಾತೆಗೆ ನೇರವಾಗಿ ಹಣ ಜಮಾವಣೆ ಮಾಡಬೇಕು ಎಂದು ಒತ್ತಾಯಿಸಿ ಉಪವಿಭಾಗಾಧಿಕಾರಿ ಬಿ.ಸಿ.ಶಿವಾನಂದ ಮೂರ್ತಿ ಹಾಗೂ ತಹಸೀಲ್ದಾರ್ ಪ್ರಮೋದ್ ಎಲ್.ಪಾಟೀಲ್ ಅವರಿಗೆ ಮನವಿ ಪತ್ರ ಸಲ್ಲಿಸಿದರು.

ಪ್ರತಿಭಟನೆಯಲ್ಲಿ ರೈತಸಂಘದ ತಾಲೂಕು ಅಧ್ಯಕ್ಷ ಚಿಕ್ಕಾಡೆ ಹರೀಶ್, ಪ್ರಧಾನ ಕಾರ್ಯದರ್ಶಿ ಕೆನ್ನಾಳು ವಿಜಯಕುಮಾರ್, ಜಿ.ಪಂ ಮಾಜಿ ಸದಸ್ಯ ಕೆ.ಟಿ.ಗೋವಿಂದೇಗೌಡ, ಮುಖಂಡರಾದ ಕೆ.ಕೆ.ಗೌಡೇಗೌಡ, ಡಿ.ಕೆ.ಸ್ವಾಮಿಗೌಡ, ಕೆ.ಎಸ್.ವಿಶ್ವನಾಥ್, ಕೆ.ಪಿ.ರವಿಕುಮಾರ್, ಎಣ್ಣೆಹೊಳೆ ಕೊಪ್ಪಲು ಮಂಜುನಾಥ್, ವೈ.ಜಿ.ರಘು, ಎಂ.ಸಿ.ದೀಪು ಇತರರಿದ್ದರು.

## ವಿದ್ಯುತ್ ವ್ಯತ್ಯಯ

ಮಂಡ್ಯ : ಚಿಕ್ಕ ಮಂಡ್ಯ ವಿದ್ಯುತ್ ವಿತರಣಾ ಕೇಂದ್ರದಿಂದ ಹೊರಡುವ ಎಫ್–2 ಷುಗರ್ ಫೀಡರ್‌ನ ಮಾರ್ಗದಲ್ಲಿ ರಸ್ತೆ ಅಗಲೀಕರಣ ತುರ್ತು ಕಾಮಗಾರಿಯ ಕೆಲಸಕ್ಕಾಗಿ ವಿದ್ಯುತ್ ಮಾರ್ಗಗಳನ್ನು ಸ್ಥಳಾಂತರಿಸುವ ಕಾಮಗಾರಿ ಕೆಲಸವನ್ನು ಪಿ.ಡಬ್ಲ್ಯೂ.ಡಿ ಇಲಾಖಾ ವತಿಯಿಂದ ಹಮ್ಮಿಕೊಳ್ಳಲಾಗಿದೆ.

ಈ ಕೆಳಕಂಡ ಸ್ಥಳಗಳಲ್ಲಿ ಜೂನ್ 19 ಮತ್ತು 20 ರಂದು ವಿದ್ಯುತ್ ವತ್ಯಯವಾಗುವುದರಿಂದ ಬೆಳಿಗ್ಗೆ 11–00 ರಿಂದ ಸಂಜೆ 5–00 ಗಂಟೆಯ ವರೆಗೆ ವಿದ್ಯುತ್ ನಿಲುಗಡೆಗೊಳಿಸಲಾಗುವುದು.

ಜೈನ ಸ್ಟ್ರೀಟ್, ಷುಗರ್ ಟೌನ್, ಸಿಹಿನೀರುಕೊಳ, ದೇವೇಗೌಡನದೊಡ್ಡಿ ಹಾಗೂ ಈ ಸುತ್ತ ಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್‌ನಲ್ಲಿ ವ್ಯತಯ ಉಂಟಾಗುವುದರಿಂದ ಗ್ರಾಹಕರು ಕಂಪನಿಯೊಂದಿಗೆ ಸಹಕರಿಸಬೇಕೆಂದು ಸೆಸ್ಕ್ ಕಾ ಮತ್ತು ಪಾ ವಿಭಾಗದ ಕಾರ್ಯ ನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹೋಂ ಗಾರ್ಡ್‌ಗಳಿಗೆ ಆಹಾರದ ಪೊಟ್ಟಣ ವಿತರಣೆ

ಪಾಂಡವಪುರ : ಕೊರೊನಾ ಎರಡನೇ ಅಲೆಯಿಂದಾಗಿ ಲಾಕ್‌ಡೌನ್ ಪ್ರಾರಂಭದಿಂದಲೂ ಸಂಕಷ್ಟದಲ್ಲಿರುವ ಜನರಿಗೆ ಊಟ ವಿತರಣೆ ಮಾಡುತ್ತಿರುವ ಅಖಿಲ ಕರ್ನಾಟಕ ಡಾ. ವಿಷ್ಣುವರ್ಧನ್ ಅಭಿಮಾನಿಗಳ ಸಂಘದ ಜಿಲ್ಲಾಧ್ಯಕ್ಷ ವಿಷ್ಣು ವಿಠಲ್ ಪಟ್ಟಣದ ಪೊಲೀಸ್ ಠಾಣೆ ಬಳಿ ಹೋಂ ಗಾರ್ಡ್‌ಗಳಿಗೆ ಆಹಾರದ ಪೊಟ್ಟಣಗಳನ್ನು ವಿತರಣೆ ಮಾಡಿದರು.

ಬಳಿಕ ಮಾತನಾಡಿ, ಮಂಡ್ಯ ಜಿಲ್ಲಾ ವಿಷ್ಣುಸೇನಾ ಸಮಿತಿ ಮಾಜಿ ಜಿಲ್ಲಾಧ್ಯಕ್ಷ ಮಂಡ್ಯ ಸತೀಶ್ ಅವರು ಪಾಂಡವಪುರ ಪಟ್ಟಣದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಹೋಂ ಗಾರ್ಡ್‌ಗಳಿಗೆ ಊಟದ ವ್ಯವಸ್ಥೆ ಮಾಡುವ ಮೂಲಕ ತಮ್ಮ ಹುಟ್ಟುಹಬ್ಬವನ್ನು ಅರ್ಥಪೂರ್ಣವಾಗಿ ಆಚರಿಸಿಕೊಂಡಿದ್ದಾರೆ. ಅತ್ಯಂತ ಸರಳ ಮತ್ತು ಜನಸ್ನೇಹಿ ವ್ಯಕ್ತಿಯಾದ ಮಂಡ್ಯ ಸತೀಶ್ ವಿಷ್ಣುವರ್ಧನ್ ಅವರ ಕಟ್ಟಾ ಅಭಿಮಾನಿಯಾಗಿದ್ದು, ವಿಷ್ಣುವರ್ಧನ್ ಹೆಸರಲ್ಲಿ ನಾವು ಮಾಡುತ್ತಿರುವ ಜನಸೇವೆಗೆ ಕೈಜೋಡಿಸಿ ನಮಗೆ ಬೆಂಬಲ ನೀಡಿದ್ದಾರೆ ಎಂದರು.

ಬಹುತೇಕ ಹೋಂ ಗಾರ್ಡ್‌ಗಳು ಗ್ರಾಮೀಣ ಪ್ರದೇಶಗಳಿಂದ ಬರುತ್ತಾರೆ. ಲಾಕ್‌ಡೌನ್ ಕಾರಣ ಯಾವುದೇ ಹೋಟೆಗಳಿಲ್ಲದೆ ಮದ್ಯಾಹ್ನದ ಊಟಕ್ಕೆ ಕಷ್ಟಪಡುವುದನ್ನು ಗಮನಿಸಿ ಅವರಿಗೆ ಊಟದ ವ್ಯವಸ್ಥೆ ಮಾಡಿದ್ದೇವೆ ಎಂದು ಹೇಳಿದರು.

ಇದೇ ವೇಳೆ ತಾವು ಉಚಿತವಾಗಿ ವಿತರಣೆ ಮಾಡುತ್ತಿರುವ ಊಟವನ್ನು ಯಾವುದೇ ಪ್ರತಿಫಲಾಪೇಕ್ಷೆಯಿಲ್ಲದೆ ತಯಾರು ಮಾಡಿಕೊಡುತ್ತಿರುವ ಹಿರೇಮರಳಿ ಗ್ರಾಮದ ಸರಸ್ವತಿ, ಶ್ರೀದೇವಿ, ಮಧು ಮತ್ತು ಹೇಮಂತ್ ಅವರ ಪ್ರಾಮಾಣಿಕ ಸೇವೆಯನ್ನು ಸ್ಮರಿಸಿದರು.

ಓಮ್ನಿ ಶಿವಕುಮಾರ್, ಹಾರೋಹಳ್ಳಿ ರವಿ, ವಡ್ಡರಹಳ್ಳಿ ಕಾಳಪ್ಪ, ಆಟೋ ಜಲೇಂದ್ರ, ಹೇಮಂತ್, ಮುಕುಂದ, ತೇಜಸ್, ಜಗನ್ ಇತರರಿದ್ದರು.

## ಕೊರೋನಾ ವಾರಿಯರ್ಸ್‌ಗೆ ಸನ್ಮಾನ

ಶ್ರೀರಂಗಪಟ್ಟಣ : ಕೋವಿಡ್–19 ನಂತಹ ಸಂಕಷ್ಟ ಕಾಲದಲ್ಲಿ ತಮ್ಮ ಜೀವನವನ್ನು ಪಣಕ್ಕಿಟ್ಟು ಸೋಂಕಿತರ ಹಾರೈಕೆಯಲ್ಲಿ ತೊಡಗುವ ಮೂಲಕ ಇಡೀ ಜಿಲ್ಲೆಗೇ ಮಾದರಿಯಾಗಿದ್ದಾಗಿ ಮಾಜಿ ಶಾಸಕ ರಮೇಶ್ ಬಂಡಿಸಿದ್ದೇಗೌಡ ವೈದ್ಯರುಗಳನ್ನು ಸನ್ಮಾನಿಸಿ ಆಸ್ಪತ್ರೆ ಸಿಬ್ಬಂಧಿಗಳಿಗೆ ಹಣ್ಣು ಮತ್ತು ದಿನಸಿಕಿಟ್ ವಿತರಿಸಿ ಶುಭ ಕೋರಿದರು.

ಪಟ್ಟಣದ ಸಾರ್ವಜನಿಕ ಆಸ್ಪತ್ರೆ ಆವರಣದಲ್ಲಿ ಏರ್ಪಡಿಸಲಾಗಿದ್ದ ಸರಳ ಕಾರ್ಯಕ್ರಮದಲ್ಲಿ ವೈದ್ಯರ ತಂಡಕ್ಕೆ ಸಿಹಿ ಮತ್ತು ಮುಖಗವಚ ನೀಡಿ ಸನ್ಮಾನಿಸಿದ ರಮೇಶ್ ಬಂಡಿಸಿದ್ದೇಗೌಡ, ಜೀವ ಮತ್ತು ಜೀವನ ಜೊತೆ ಬದುಕಿನ ಅಯ್ಕೆಯ ಬಗ್ಗೆ ಗೊಂದಲವಿದ್ದ ಈ ಕಾಲದಲ್ಲಿ ನಿಮ್ಮ ಶಕ್ತಿ ಮೀರಿ ಸಾರ್ವಜನಿಕರ ಜೀವ ಕಾಪಾಡಿದ ಕೀರ್ತಿ ವೈದ್ಯರು ಮತ್ತು ಸಿಬ್ಬಂದಿಗಳಿಗೆ ಸಲ್ಲಬೇಕು. ನಾನು ಸದಾ ತಮ್ಮೊಂದಿಗೆ ಸದಾ ಕೈ ಜೋಡಿಸಲಿದ್ದು, ಆಸ್ಪತ್ರೆಗೆ ಸಂಬಂಧಿಸಿದಂತೆ ಯಾವುದೇ ಮೂಲಭೂತ ಸಮಸ್ಯೆಗಳಿಗೆ ಸ್ಪಂಧಿಸುವುದಾಗಿ ರಮೇಶ್ ಬಂಡಿಸಿದ್ದೇಗೌಡ ವೈದ್ಯಾಧಿಕಾರಿಗಳಿಗೆ ಭರವಸೆ ನೀಡಿದರು.

ಕಾಂಗ್ರೆಸ್ ಹಿರಿಯ ಮುಖಂಡ ವಕೀಲ ಎಂ.ಪುಟ್ಟೇಗೌಡ ಮಾತನಾಡಿ, ವೈದ್ಯರು ತಮ್ಮ ಪ್ರಾಣದ ಹಂಗು ತೊರೆದು ಕೊರೋನ ಸೋಂಕಿತರ ಹಾರೈಕೆಯಲ್ಲಿ ತೊಡಗಿದ್ದಾರೆ. ಕೋವಿಡ್‌ನಿಂದ ಸತ್ತವರನ್ನು ಕುಟುಂಬದವರೇ ಅಂತ್ಯ ಸಂಸ್ಕಾರ ನೆರವೇರಿಸಲು ಹಿಂಜರಿಯುತ್ತಿರುವ ಈ ಸಂದರ್ಭದಲ್ಲಿ ಸದಾ ಅವರ ಜೊತೆಯಲ್ಲಿದ್ದು ಎಲ್ಲಾ ರೀತಿಯ ಹಾರೈಕೆಯಲ್ಲಿ ತೊಡಗಿರುವ ಮಹತ್ತರ ಸಾಧನೆ ವೈದ್ಯರದ್ದಾಗಿದ್ದು ಈ ಮೂಲಕ ಅವರಿಗೆ ಅಭಿನಂದನೆ ಸಲ್ಲಿಸುತ್ತಿರುವುದಾಗಿ ತಿಳಿಸಿದರು.

ಹಾಗೆಯೇ ಪತ್ರಕರ್ತರೂ ಸಹ ಸಾರ್ವಜನಿಕರಿಗೆ ವಸ್ತುನಿಷ್ಠ ವರದಿ ನೀಡುವ ಸಲುವಾಗಿ ಕೋವಿಡ್ ಅನ್ನೂ ಲೆಕ್ಕಿಸದೆ ಮನುನ್ನುಗ್ಗಿ ಹಗಲಿರುಳು ದುಡಿಯುತ್ತಿದ್ದು, ಅವರಿಗೆ ಮತ್ತು ಅವರ ಕುಟುಂಬಕ್ಕೆ ಪ್ರತಿಯೊಬ್ಬರೂ ಬೆನ್ನೆಲುಬಾಗಿ ನಿಂತ ಸಹಕಾರ ನೀಡಬೇಬೇಕೆಂದು ಅವರು ತಿಳಿಸಿದರು.

ತಾಲ್ಲೂಕು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಪ್ರಕಾಶ್, ತಾಲ್ಲೂಕು ಆರೋಗ್ಯಾಧಿಕಾರಿ ಡಾ.ವೆಂಕಟೇಶ್, ಮುಖ್ಯ ವೈದ್ಯಾಧಿಕಾರಿ ಡಾ.ಮಾರುತಿ, ಪುರಸಭೆ ಸದಸ್ಯ ಎಂ.ಎಲ್.ದಿನೇಶ್, ಮುಖಂಡರಾದ ದಯಾನಂದ್, ನಂದೀಶ್, ಯುವ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಲೋಕೇಶ್, ಸೋಮ ಸುಂದರ್, ಜಯಕುಮಾರ್ ಉಪಸ್ಥಿತರಿದ್ದರು.

ಪುರಸಭೆಗೆ ತೆರಳಿ ಅಲ್ಲಿನ ಪೌರಕಾರ್ಮಿಕರಿಗೆ ಮಾಜಿ ಶಾಸಕ ರಮೇಶ್ ಬಂಡಿಸಿದ್ದೇಗೌಡ ದಿನಸಿ ಕಿಟ್ ವಿತರಿಸಿ ಸಂತೈಸಿದರು.

Published and Owned by : Smt ARUNA JYOTHI.B.K. From No. 292, Basaveshwara Nilaya, Basaveshwara Maarga,Kaveri Nagar, Mandya Printed by : PUTTASWAMY,9th Cross, Vinoba Road,Subash Nagar, Mandya-571401, Mandya Dist. Karnataka. Editor : ARUNA JYOTHI.B.K.